ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com
ಸಂಪುಟ: 01 ಸಂಚಿಕೆ: 106
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಗುರುವಾರ: 02-04-2026


## ಬಿಸಿಲಿನ ತೀವ್ರತೆ: ಕಚೇರಿ ವೇಳೆಯಲ್ಲಿ ಬದಲಾವಣೆ

### ಸಾರ್ವಜನಿಕ ಸೇವೆಗೆ ವ್ಯತ್ಯಯ ಆಗದಂತೆ ಅಧಿಕಾರಿಗಳಿಗೆ ನಿರ್ದೇಶನ

ಧೈರ್ಯದ ದಾರಿ

**ರಾಯಚೂರು:** 2026ನೇ ಸಾಲಿನ ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನ ಹಿನ್ನಲೆಯಲ್ಲಿ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಏಪ್ರಿಲ್ 1 ರಿಂದ ಅನ್ವಯವಾಗುವಂತೆ ಪ್ರತಿದಿನ ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕಚೇರಿ ಸಮಯದಲ್ಲಿ ಬದಲಾವಣೆ ಹಿನ್ನಲೆಯಲ್ಲಿ ಬುಧವಾರ ದಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಜಿ.ಪಂ ಕಾರ್ಯಾಲಯದ ವಿವಿಧ ಶಾಖೆಗಳಿಗೆ ಭೇಟಿ ನೀಡಿ ಹಾಜರಾತಿಯನ್ನು ಪರಿಶೀಲನೆ ಮಾಡಿದರು.

ಈ ವೇಳೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ, ಅಡೆತಡೆ ಇಲ್ಲದೇ ಕರ್ತವ್ಯ ನಿರ್ವಹಿಸತಕ್ಕದ್ದು, ಸಾರ್ವಜನಿಕರಿಗೆ ಯಾವುದೇ ರೀತಿ ಅನಾನುಕೂಲತೆಯಾಗದಂತೆ ಹಾಗೂ ತುರ್ತು ಸಂದರ್ಭದಲ್ಲಿ ಯಾವುದೇ ಕಾರ್ಯವನ್ನು ನಿರ್ವಹಿಸಲು ನಿರ್ದೇಶಿಸಿದಲ್ಲಿ ಸಮಯದ ಪರಿಮಿತಿ ಇಲ್ಲದೇ ಕರ್ತವ್ಯ ನಿರ್ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಜಿ.ಪಂ ಕಾರ್ಯಾಲಯದ ವಿವಿಧ ವಿಭಾಗಗಳಾದ ಆಡಳಿತ ವಿಭಾಗ, ನರೇಗಾ ವಿಭಾಗ, ಎಸ್.ಬಿ.ಎಂ ವಿಭಾಗ, ಲೆಕ್ಕಾ ಶಾಖೆ ವಿಭಾಗ, ಯೋಜನಾ ವಿಭಾಗ, ಗ್ರಾಮೀಣಾ ಮತ್ತು ಕುಡಿಯುವ ನೀರು ಶಾಖೆಗಳಿಗೆ ಭೇಟಿ ನೀಡಿ ಸಿಬ್ಬಂದಿಗಳ ಹಾಜರಾತಿಯನ್ನು ಪರಿಶೀಲಿಸಿದರು. ಇನ್ನೂ ಕೆಲವು ಅಧಿಕಾರಿ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಬಾರದೆ ಇರುವ ಕಾರಣ ಅವರಿಗೆ ಇನ್ನು ಮುಂದೆ ಈ ರೀತಿಯಾಗದಂತೆ ಕಟ್ಟುನಿಟ್ಟಿನ ಎಚ್ಚರಿಕೆಯನ್ನು ನೀಡಿದರು.ನಂತರ ಕೆಲವು ಶಾಖೆಗಳಲ್ಲಿ ಸ್ವಚ್ಚತೆ ಇಲ್ಲದಿರುವುದನ್ನು ಕಂಡು ಅಸಮಧಾನಗೊಂಡು ಸ್ವಚ್ಚವಾಗಿ ಇಟ್ಟುಕೊಳ್ಳಲು ಸಂಬಂಧಿಸಿದ ಸಿಬ್ಬಂದಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಯೋಜನಾ ನಿರ್ದೇಶಕರು ಶರಣಬಸವರಾಜ ಕೆ, ಮುಖ್ಯ ಯೋಜನಾ ಅಧಿಕಾರಿ ಡಾ.ಟಿ.ರೋಣಿ, ಲೆಕ್ಕಾಧಿಕಾರಿ ವಿಜಯ ಶಂಕರ, ಸಹಾಯಕ ಕಾರ್ಯದರ್ಶಿ ರಾಘವೇಂದ್ರ ಸೇರಿದಂತೆ ಇತರರು ಇದ್ದರು.

## ಅಪರಿಚಿತ ಪುರುಷನ ಶವ ಪತ್ತೆ

ಧೈರ್ಯದ ದಾರಿ



**ರಾಯಚೂರು:** ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ರೈಲ್ವೇ ಸ್ಟೇಷನ್ ಏರಿಯಾದ ಗೂಡ್ ಶೇಡ್‌ನಲ್ಲಿ ಮಾರ್ಚ್ 28ರ ಸಂಜೆ 5.30ಗಂಟೆ ಸುಮಾರಿಗೆ ಅಂದಾಜು 45-50 ವರ್ಷ ವಯಸ್ಸಿನ ಅಪರಿಚಿತ ಪುರುಷನ ಶವ ಕಂಡುಬಂದಿದ್ದು, ಸಂಬಂಧಿಕರ ಪತ್ತೆಗೆ ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಗಳು ಕೋರಿದ್ದಾರೆ.

ಅಪರಿಚಿತ ಮೃತನ ಹೆಸರು, ವಿಳಾಸ ತಿಳಿದು ಬಂದಿಲ್ಲ. ವ್ಯಕ್ತಿಯ ವಯಸ್ಸು 45-50 ವರ್ಷ, 5.5 ಎತ್ತರ ದುಂಡು ಮುಖ, ಗೋದಿ ಮೈ ಬಣ್ಣ ಮೈಬಣ್ಣ ಚಹರೆ ಹೊಂದಲಾಗಿದೆ.

ಮೃತನ ಮಾಹಿತಿ ತಿಳಿದು ಬಂದಲ್ಲಿ ಪಶ್ಚಿಮ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532-232507 ಅಥವಾ ಪಶ್ಚಿಮ ಪೊಲೀಸ್ ಠಾಣೆಯ ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803847 ಗೆ ಸಂಪರ್ಕಿಸುವಂತೆ ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೌರಕಾರ್ಮಿಕರ ಕ್ಷೇಮ ಮತ್ತು ಪಟ್ಟಣದ ಸ್ವಚ್ಛತೆಗೆ ಹಾಜಿ ಚೌದ್ರಿ ಬಜೆಟ್‌ನಲ್ಲಿ ಆದ್ಯತೆ.



ಧೈರ್ಯದ ದಾರಿ

**ಸಿರವಾರ:** ಸ್ಥಳೀಯ ಪಟ್ಟಣ ಪಂಚಾಯತಿ ಕಾರ್ಯಾಲಯದಲ್ಲಿ 2026-27ನೇ ಸಾಲಿನ ಆರ್ಥಿಕ ವರ್ಷಕ್ಕೆ ಸಂಬಂಧಿಸಿದಂತೆ ಒಟ್ಟು 16 ಕೋಟಿ ರೂ.ಗಳ ಆಯವ್ಯಯ (ಬಜೆಟ್) ಮಂಡನೆ ಸಭೆಯು ಮಂಗಳವಾರ ಯಶಸ್ವಿಯಾಗಿ ಜರುಗಿತು. ಅಧ್ಯಕ್ಷರಾದ ಹಾಜಿ ಚೌದ್ರಿ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಹಲವು ಪ್ರಮುಖ ಯೋಜನೆಗಳನ್ನು ಘೋಷಿಸಲಾಯಿತು.

ಉದ್ದೇಶ / ಕಾರ್ಯಕ್ರಮ ಮೀಸಲಿಟ್ಟ ಮೊತ್ತ (ರೂ.ಗಳಲ್ಲಿ)
ಒಟ್ಟು ಬಜೆಟ್ ಗಾತ್ರ 16 ಕೋಟಿ
16ನೇ ಹಣಕಾಸು ಯೋಜನೆ (ಮೂಲಸೌಕರ್ಯ) 2.61 ಕೋಟಿ
ಪೌರ ಕಾರ್ಮಿಕರ ವೇತನ (ಖಾಯಂ) 63.36 ಲಕ್ಷ
ನೀರು ಸರಬರಾಜು ಮತ್ತು ನಿರ್ವಹಣೆ 24 ಲಕ್ಷ
ರಸ್ತೆ ಬದಿ ದೊಡ್ಡ ಚರಂಡಿ ನಿರ್ವಹಣೆ 10 ಲಕ್ಷ
ವಾರ್ಡ್‌ಗಳಲ್ಲಿ ನಾಮಫಲಕ ಅಳವಡಿಕೆ 9.35 ಲಕ್ಷ
ಮಳೆಗಾಲದ ತುರ್ತು ಕಾರ್ಯಗಳು 7 ಲಕ್ಷ
ಸಣ್ಣ ಚರಂಡಿ ಹಾಗೂ ಸೇತುವೆ ನಿರ್ವಹಣೆ 6 ಲಕ್ಷ
ಶೌಚಾಲಯ ದುರಸ್ತಿ ಮತ್ತು ನಿರ್ವಹಣೆ 6 ಲಕ್ಷ
ರಾಷ್ಟ್ರೀಯ ದಿನಾಚರಣೆ ವೆಚ್ಚ 6 ಲಕ್ಷ
ಬೀದಿ ದೀಪ ನಿರ್ವಹಣೆ 5.5 ಲಕ್ಷ
ಪರಿಸರ ಸಂರಕ್ಷಣೆ 2.25 ಲಕ್ಷ
ಪತ್ರಿಕಾ ಭವನಕ್ಕೆ 10 ಲಕ್ಷ
ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆ 1.10 ಲಕ್ಷ

ಪ್ರಮುಖ ಅಭಿವೃದ್ಧಿ ಯೋಜನೆಗಳು
ಬಜೆಟ್‌ನಲ್ಲಿ ಹಣಕಾಸು ಹಂಚಿಕೆಯ ಜೊತೆಗೆ ಈ ಕೆಳಗಿನ ಪ್ರಮುಖ ಸೌಲಭ್ಯಗಳಿಗೆ ಒತ್ತು ನೀಡಲಾಗಿದೆ:

**ಆದಾಯ:** ಪಟ್ಟಣ ಪಂಚಾಯತಿಯಿಂದ ಸುಮಾರು 73 ಲಕ್ಷ ರೂ. ತೆರಿಗೆ ಸಂಗ್ರಹವಾಗಿದೆ.

**ನಾಗರಿಕ ಸೌಲಭ್ಯ:** ವಿವಿಧ ವಾರ್ಡ್‌ಗಳಲ್ಲಿ ಮಹಿಳೆಯರಿಗೆ ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯ ನಿರ್ಮಾಣ.

ಆರೋಗ್ಯ ಮತ್ತು ನೈರ್ಮಲ್ಯ: ಘನತ್ಯಾಜ್ಯ ವಿಲೇವಾರಿ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶವ ಸಾಗಾಣಿಕೆ ವಾಹನದ ಸೌಲಭ್ಯ.

**ಸಾಮಾಜಿಕ ಕಲ್ಯಾಣ:** ವಿಕಲಚೇತನರ ಅಭಿವೃದ್ಧಿ ವಂತಿಕೆ ಮತ್ತು ಬಡಜನರ ಕಲ್ಯಾಣ ಕಾರ್ಯಕ್ರಮಗಳಿಗೆ ಅನುದಾನ.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಸುರೇಶ ಶೆಟ್ಟಿ ಅವರು ಬಜೆಟ್ ವಿವರಗಳನ್ನು ಸಭೆಗೆ ಮಂಡಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ಲಕ್ಷ್ಮಿ ಆದೆಪ್ಪ ನಾಯಕ, ಸದಸ್ಯರಾದ ಸಂದೀಪ ಪಾಟೀಲ, ಕೃಷ್ಣ ನಾಯಕ, ಎಚ್. ಮಾರ್ಕಪ್ಪ, ಹಸೇನಲಿಸಾಬ್, ಮೌಲಸಾಬ್ ವರ್ಚಸ್, ಅಜೀತ ಹೊನ್ನುಟಗಿ, ವೈ. ಭೂಪನಗೌಡ, ಅಮರೇಶ ಗಡ್ಲ, ಚನ್ನಪ್ಪ ಗಡ್ಲ, ಮಲ್ಲಿಕಾರ್ಜುನ ಹಾಗೂ ಮಹಿಳಾ ಸದಸ್ಯರಾದ ಹನುಮಂತಿ, ಖಾಜಮ್ಮ, ಪುತ್ರಮ್ಮ, ಚಂದಮ್ಮ, ಬಸಮ್ಮ ಉಪಸ್ಥಿತರಿದ್ದರು. ಅಲ್ಲದೆ, ಪ್ರಮುಖರಾದ ಹಂಪಯ್ಯ ಪಾಟೀಲ, ಜೆಇ ಹಸೇನಿ, ಲೆಕ್ಕಾಧಿಕಾರಿ ಭೀಮರಾಯ ಸೇರಿದಂತೆ ಪಂಚಾಯತಿ ಸಿಬ್ಬಂದಿ ಭಾಗವಹಿಸಿದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆ ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಜಿಲ್ಲಾಧಿಕಾರಿ ನಿತೀಶ್ ಕೆ.

ಧೈರ್ಯದ ದಾರಿ

**ರಾಯಚೂರು:** ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಇದೇ ಏಪ್ರಿಲ್ 14ರಂದು ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಏಪ್ರಿಲ್ 01ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏಪ್ರಿಲ್ 14ರ ಬೆಳಗ್ಗೆ 9.30ಗಂಟೆಗೆ ರಾಯಚೂರು ನಗರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಪುತ್ಥಳಿಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ನೆರವೇರಿಸಲಾಗುವುದು. ನಂತರ ಬೆಳಿಗ್ಗೆ 11ಕ್ಕೆ ನಗರದ ರಂಗಮಂದಿರದಲ್ಲಿ ಮುಖ್ಯ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗುವುದು. ಕಾರ್ಯಕ್ರಮಕ್ಕೆ ಅಗತ್ಯವಿರುವ ಪೆಂಡಾಲ್, ಬ್ಯಾನರ್, ಆಸನ ವ್ಯವಸ್ಥೆ, ಸ್ವಚ್ಛತೆ ಸೇರಿದಂತೆ ಇತರೆ ವ್ಯವಸ್ಥೆ ಮಹಾನಗರ ಪಾಲಿಕೆಯಿಂದ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಕಾರ್ಯಕ್ರಮದ ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದ ಪ್ರಕಾರ ಮುದ್ರಿಸಿ, ಮುಂಚಿತವಾಗಿಯೇ ಜನಪ್ರತಿನಿಧಿಗಳನ್ನು ಆಹ್ವಾನಿಸಬೇಕು. ಮೆರವಣಿಗೆಯಲ್ಲಿ ಪಾಲ್ಗೊಳ್ಳಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕಲಾ ತಂಡಗಳನ್ನು ಆಹ್ವಾನಿಸಬೇಕೆಂದರು.



ಪ್ರತಿ ವರ್ಷದಂತೆ ಈ ವರ್ಷವು ಎಲ್ಲರೂ ಸೇರಿ ಅದ್ದೂರಿಯಾಗಿ ಜಯಂತಿ ಆಚರಿಸೋಣ, ವಿವಿಧ ಇಲಾಖೆಯ ಅಧಿಕಾರಿಗಳಿಗೆ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ವಿಶೇಷವಾಗಿ ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆಯು ಬಹಳ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಅಂಬೇಡ್ಕರ್ ಅವರ ಕುರಿತು ಮಾತನಾಡುವ ಒಳ್ಳೆಯ ಉಪನ್ಯಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಅಲ್ಲದೆ ಕಾರ್ಯಕ್ರಮಕ್ಕೆ ಬರುವ ಜನರಿಗೆ ನೀರಿನ ವ್ಯವಸ್ಥೆ ಹಾಗೂ ಒಳ್ಳೆಯ ಊಟದ ವ್ಯವಸ್ಥೆ ಮಾಡಬೇಕು. ವರ್ಷಕ್ಕೆ ಒಂದು ದಿನ ಕಾರ್ಯಕ್ರಮ ಇರುವುದರಿಂದ ಎಲ್ಲರೂ ಕಾರ್ಯಕ್ರಮದ ಯಶಸ್ವಿಗೆ ಸಹಕಾರ ನೀಡಬೇಕು. ಅಧಿಕಾರಿಗಳು ಅಂಬೇಡ್ಕರ್ ಜಯಂತಿ ದಿನ ಎಲ್ಲರೂ ಕಡ್ಡಾಯವಾಗಿ ಹಾಜರಿರಬೇಕು. ಇದೊಂದು ಮಾದರಿಯ ಕಾರ್ಯಕ್ರಮ ಆಗಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರು ಮಾತನಾಡಿ, ಜಯಂತಿ ದಿನದಂದು ಪೊಲೀಸ್ ಇಲಾಖೆಯಿಂದ ಅಗತ್ಯ ಬಂದೋಬಸ್ತ್ ವ್ಯವಸ್ಥೆಯನ್ನು ಮಾಡಲಾಗುವುದು. ಅಲ್ಲದೆ ಏಪ್ರಿಲ್ 13ರ ಮಧ್ಯ 2ನೇಪುಟಕ್ಕೆ

## ಈರಣ್ಣ ನಾಯಕ ನಿವೃತ್ತಿ: 31 ವರ್ಷಗಳ ಶಿಕ್ಷಣ ಸೇವೆಗೆ ವಿದಾಯ



ಧೈರ್ಯದ ದಾರಿ

**ಮಾನ್ವಿ :** ಬೆಂಗಳೂರು ಗ್ರಾಮಾಂತರ, ರಬ್ಬಣಕಲ್, ಕಾತರಿಗೆ ಹಾಗೂ ಆದಾಪುರ ಪೇಟೆ ಶಾಲೆಗಳಲ್ಲಿ 31 ವರ್ಷ 7 ತಿಂಗಳುಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಈರಣ್ಣ ನಾಯಕ ಅವರು ವಯೋ ನಿವೃತ್ತಿ ಹೊಂದಿದ್ದಾರೆ ಎಂದು ಮುಖ್ಯಗುರು ಹೆಚ್.ಡಿ ಪ್ರಕಾಶಬಾಬು ತಿಳಿಸಿದರು. ಈರಣ್ಣ ಅವರು ತಮ್ಮ ಸೇವಾ ಅವಧಿಯಲ್ಲಿ ವಿದ್ಯಾರ್ಥಿಗಳಲ್ಲಿ ಶಿಸ್ತು ಮತ್ತು ಶಿಕ್ಷಣದ ಮೌಲ್ಯಗಳನ್ನು ಬೆಳೆಸಲು ಶ್ರಮಿಸಿದ್ದಾರೆ ಎಂದು ಹೇಳಿದರು.

ಈರಣ್ಣ ಅವರ ಸಂಘಟನೆ ಮತ್ತು ಕಾರ್ಯಪಟುತೆಯ ಬಗ್ಗೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷ ಸಂಗಮೇಶ್ ಮುಧೋಳ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಅವರ ಕೊಡುಗೆ ಅನನ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಿಆರ್‌ಪಿ ಶ್ರೀಧರ್ ರಾವ್ ದೇಸಾಯಿ ಅವರು ಈರಣ್ಣ ಶಿಕ್ಷಕರ ವೃತ್ತಿ ಜೀವನದ ಸಾಧನೆಗಳನ್ನು ಸ್ಮರಿಸಿ, ಅವರ ಸೇವೆ ಹೊಸ ತಲೆಮಾರಿಗೆ ಪ್ರೇರಣೆಯಾಗಿದೆ ಎಂದರು.

ಈರಣ್ಣ ನಾಯಕ ಅವರು ಮಾತನಾಡುತ್ತಾ ತಮ್ಮ ವೃತ್ತಿ ಜೀವನದ ಅನುಭವಗಳನ್ನು ಹಂಚಿಕೊಂಡು, ಮಕ್ಕಳಲ್ಲಿ ಶಿಕ್ಷಣದ ಮಹತ್ವವನ್ನು ತಿಳಿಸಿದರು. ಈ ಸಂದರ್ಭದಲ್ಲಿ ಲಲಿತಾ ಈರಣ್ಣ ನಾಯಕ, ಪುರಸಭೆ ಸದಸ್ಯ ಭಾಷಾ ಸಾಬ್, ಎಸ್‌ಡಿಎಂಸಿ ಅಧ್ಯಕ್ಷ ಸಜ್ಜಲಿ ನಾಯಕ, ಸರ್ಕಾರಿ ನೌಕರರ ಸಂಘದ ನಿರ್ದೇಶಕ ವಿಜಯಕುಮಾರ್ ಸಿ.ಡಿ, ಪ್ರಭಾರಿ ಮುಖ್ಯಗುರು ಬಸಪ್ಪ, ಲಕ್ಷ್ಮೀದೇವಿ, ಕೆ. ನಾಗರಾಜ, ಲಕ್ಷ್ಮಿ ಕೆ, ಉಮಾದೇವಿ ಸೇರಿದಂತೆ ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಿದ್ದಗಂಗಾ ಮಠದ ಲಿಂ. ಶ್ರೀ.ಶಿವಕುಮಾರ ಸ್ವಾಮಿಗಳ ಜನ್ಮದಿನಾಚರಣೆ ಅಂಗವಾಗಿ ಅನ್ನದಾಸೋಹ



ಧೈರ್ಯದ ದಾರಿ

**ಮಾನ್ವಿ:**ಪಟ್ಟಣದ ನೆರಳು ಹಿರಿಯರ ಮನೆಯಲ್ಲಿ ಸಿದ್ದಗಂಗಾ ಮಠದ ಲಿಂ. ಶ್ರೀ.ಶಿವಕುಮಾರ ಸ್ವಾಮಿಗಳ 119ನೇ ಹುಟ್ಟು ಹಬ್ಬವನ್ನು ಸಿದ್ದಗಂಗಾ ಮಠದ ಹಳೆಯ ವಿದ್ಯಾರ್ಥಿಗಳು ಆಚರಣೆ ಮಾಡಿದರು.

ಸಿದ್ದಗಂಗಾ ಮಠದ ಲಿಂ. ಶ್ರೀ.ಶಿವಕುಮಾರ ಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಮಠದ ಹಳೆಯ ವಿದ್ಯಾರ್ಥಿ ವೆಂಕಯ್ಯ ಶೆಟ್ಟಿ ಮಾತನಾಡಿ ನಾಡಿನ ಸಿದ್ದಗಂಗಾ ಮಠವು ತ್ರಿವೀದ ದಾಸೋಹಗಳಾದ ಅನ್ನ,ಅಕ್ಷರ,ಅಭಯವನ್ನು ನೀಡುವ ಪುಣ್ಯ ಕ್ಷೇತ್ರವಾಗಿದು ಇಂದು ಶ್ರೀಮಠದಲ್ಲಿ ಸಾವಿರಾರು ಮಕ್ಕಳಿಗೆ ಆಶ್ರಯವನ್ನು ನೀಡಿ ಉತ್ತಮ ಶಿಕ್ಷಣವನ್ನು,ಸಂಸ್ಕರವನ್ನು ನೀಡುವ ಮೂಲಕ ನಾಡಿನ ಉತ್ತಮ ಪ್ರೇಜೆಗಳನ್ನಾಗಿ ರೂಪಿಸುತ್ತಿದೆ ಶ್ರೀಮಠದಲ್ಲಿ ಲಿಂ. ಶ್ರೀ.ಶಿವಕುಮಾರ ಸ್ವಾಮಿಗಳ ಆಶ್ರಯದಲ್ಲಿ ಬೆಳೆದ ಲಕ್ಷಾಂತರ ವಿದ್ಯಾರ್ಥಿಗಳು ಇಂದು ಉತ್ತಮ ಜೀವನವನ್ನು ರೂಪಿಸಿಕೊಂಡಿದ್ದಾರೆ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯೋಣ ನಮ್ಮನ್ನು ನಾವು ಸಮಾಜ ಸೇವೆಯಲ್ಲಿ ತೊಡಗಿಸಿ ಕೊಳ್ಳೋಣ ಎಂದು ತಿಳಿಸಿದರು. ಬಾಲಪ್ಪ ನಾಯಕ ಮಾತನಾಡಿ ಲಿಂ.ಶ್ರೀ ಶಿವಕುಮಾರ ಸ್ವಾಮೀಜಿಗಳು ನಮ್ಮೆಲ್ಲರ ನೆಡೆದಾಡುವ ದೇವರಾಗಿದ್ದರು. ಹಾಗೂ ನಾಡಿನ ಮಕ್ಕಳಿಗೆ ಆಶ್ರಯದಾತರಾಗಿದ್ದರು ಅವರ ಹುಟ್ಟು ಹಬ್ಬವನ್ನು ಸಮಾಜಿಕ ಕಾರ್ಯಕ್ರಮಗಳ ಮೂಲಕ ಅರ್ಥಿಪೂರ್ಣ ವಾಗಿ ಆಚರಿಸೋಣ ಎಂದು ತಿಳಿಸಿದರು. ಸಿದ್ದಗಂಗಾ ಮಠದ ಲಿಂ. ಶ್ರೀ.ಶಿವಕುಮಾರ ಸ್ವಾಮಿಗಳ ಜನ್ಮದಿನದ ಅಂಗವಾಗಿ ಹಿರಿಯರ ಮನೆಯ ಸದಸ್ಯರಿಗೆ ಅನ್ನದಾಸೋಹವನ್ನು ಮಾಡಲಾಯಿತು. ನೆರಳು ಹಿರಿಯರ ಮನೆಯ ವ್ಯವಸ್ಥಾಪಕರಾದ ಚನ್ನಬಸವ ಸ್ವಾಮಿ ಯದ್ದಲದೊಡ್ಡಿ, ಅಮರೇಶ ಯಡಿವಾಳ, ಹನುಮಂತ ಡೋಣಮರಡಿ, . ಬಸವರಾಜ ವಕೀಲರು, .ಚನ್ನಬಸವ ಕೊಡ್ಲಿ,ಮಂಜುನಾಥ.ಸಿ.ಬಿ. ರಾಮು ಕಾತರಕಿ, ವೆಂಕಟೇಶ ಬಲ್ಲಟಗಿ,ಹನುಮೇಗೌಡ ಸೇರಿದಂತೆ ಸಿದ್ದಗಂಗಾ ಮಠದ ಹಳೆಯ ವಿದ್ಯಾರ್ಥಿಗಳು, ನೆರಳು ಹಿರಿಯರ ಮನೆಯ ನಿವಾಸಿಗಳು ಇದ್ದರು.

**ಮೊದಲನೇ ಪುಟದಿಂದ**

## ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆ ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಜಿಲ್ಲಾಧಿಕಾರಿ ನಿತೀಶ್ ಕೆ.

ರಾತ್ರಿಯಿಂದಲ್ಲೇ ಮದ್ಯ ಮಾರಾಟವನ್ನು ನಿಷೇಧ ಮಾಡಲಾಗುತ್ತದೆ. ಮೆರವಣಿಗೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯಕ್ರಮ ಆಚರಣೆ ಮಾಡಬೇಕೆಂದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ ಕುಮಾರ್ ಅವರು ಹಿಂದಿನ ಸಭೆಯ ಸಭಾ ನಡಾವಳಿಯನ್ನು ಓದಿ ಹೇಳಿದರು.

ಈ ವೇಳೆ ಸಮಾಜದ ಮುಖಂಡರಾದ ರಾಜು ಅವರು ಮಾತನಾಡಿ, ಜಯಂತಿ ಕಾರ್ಯಕ್ರಮ ದಿನದಂದು ಸರ್ಕಾರಿ ರಜೆ ಇದ್ದು, ಅಧಿಕಾರಿಗಳು ಗೈರು ಆಗದಂತೆ ನೋಡಿಕೊಂಡು, ಎಲ್ಲಾ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕೆಂದರು.

ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನ ರಾಂ ಅವರ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಜನಪ್ರತಿನಿಧಿಗಳು ಭಾಗಿಯಾಗಬೇಕೆಂದು ವಸಂತ ಅವರು ಹೇಳಿದರು.

ಸ್ಥಳೀಯರಿಗೆ ಉಪನ್ಯಾಸಕರಾಗಿ ಆಯ್ಕೆಗೆ ಅವಕಾಶ ನೀಡಬೇಕು. ಅಲ್ಲದೆ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಮಹಾವೀರ ಅವರು ಸಭೆಯ ಗಮನಕ್ಕೆ ತಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಿಲ್ಲಾ ವ್ಯವಸ್ಥಾಪಕರಾದ ಶ್ರೀಹರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ, ಜಿಲ್ಲಾ ಸಾಂಖ್ಯಿಕ ಅಧಿಕಾರಿ ಡಾ.ತಿಪ್ಪಣ್ಣ ಸೇರಿದಂತೆ ಸಮಾಜದ ಮುಖಂಡರಾದ ಎಂ.ವಸಂತ, ಎಸ್.ರಾಜು, ಮಹೇಶ ಕುಮಾರ್, ರವೀಂದ್ರ ಘಾಟಗೆ, ಸುಧಾಕರ ನೆಲಹಾಳ, ನರಸಿಂಹ, ಗಿರೀಶ ಬಿ.ಕೆ, ಗೌತಮ, ಯಲ್ಲಪ್ಪ ಸೇರಿದಂತೆ ಇತರರು ಉಪಸ್ಥರಿದ್ದರು.

## ಏಪ್ರಿಲ್ 09ರಂದು ಅಕ್ಕಿ ದಾಸ್ತಾನು ಬಹಿರಂಗ ಹರಾಜು: ತಹಶೀಲ್ದಾರ್ ನಾಗಮ್ಮ

ಧೈರ್ಯದ ದಾರಿ



**ರಾಯಚೂರು:** ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಕೆ.ಎಫ್.ಸಿ. ಎಸ್.ಸಿ ಸಗಟು ಮಳಿಗೆಯಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಯಾದ ಅಕ್ಕಿ ದಾಸ್ತಾನನ್ನು ಬಹಿರಂಗ ಹರಾಜು ಪ್ರಕ್ರಿಯೆ ಯನ್ನು ಏಪ್ರಿಲ್ 9ರ ಬೆಳಿಗ್ಗೆ 12ಗಂಟೆಗೆ ದೇವದುರ್ಗ ತಹಶೀಲ್ದಾರ್ ಕಚೇರಿ ಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಅವರು ಕೋರಿದ್ದಾರೆ. ದೇವದುರ್ಗ ತಾಲ್ಲೂಕಿನ ಸಗಟು ಗೋದಾಮುಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾದ ಆಹಾರ ಧಾನ್ಯ ಗಳನ್ನು ತಾಲ್ಲೂಕವಾರು ಬಹಿ ರಂಗ ಹರಾಜು ಮೂಲಕ ವಿಲೇವಾರಿ ಮಾಡಬೇಕಾ ಗಿರುವುದರಿಂದ ವಿವಿಧ ಪ್ರಕ ರಣಗಳಲ್ಲಿ ಜಪ್ತಿ ಮಾಡಲಾದ 258.96 ಕ್ವಿಂಟಾಲ್ ಅಕ್ಕಿ ಆಹಾರ ಧಾನ್ಯಗಳ ತಾಲ್ಲೂಕಿನ ಕೆಎಫ್‌ಸಿಎಸ್‌ಸಿ ಸಗಟು ಮಳಿಗೆಗಳಲ್ಲಿ ಲಭ್ಯವಿದ್ದು, ಈ ದಾಸ್ತಾನನ್ನು ಸರ್ಕಾರವು ನಿಗಧಿಪಡಿಸಿದ ಮೂಲ ಬೆಲೆ 28ರೂ. ಇದ್ದು ಇದನ್ನು ಬಹಿರಂಗ ಹರಾಜು ಮಾಡಲಾ ಗುವುದು.

**ಬಹಿರಂಗ ಹರಾಜು ಷರತ್ತುಗಳು:** ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎಪಿಎಂಸಿ ಪರವಾನಿಗೆದಾರರು ಅಥವಾ ಪರವಾನಿಗೆ ಪಡೆದ ಸಗಟು, ಚಿಲ್ಲರೆ ವ್ಯಾಪಾರಿಗಳು, ಕಮಿಷನ್ ಏಜೆಂಟರ್, ಅಕ್ಕಿ ಗಿರಣಿ ಮಾಲೀಕರು ಹಾಗೂ ದೊಡ್ಡ ಪ್ರಮಾಣದಾರ ಬಳಕೆದಾರ ಸಂಸ್ಥೆಗಳು ಆಗಿರಬೇಕು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಬಹಿರಂಗ ಹರಾಜು ದಿನ ಪೂರ್ವಾಹ್ನ 10ಗಂಟೆಗೆ ಹರಾಜು ಸ್ಥಳದಲ್ಲಿ ಹಾಜರಾಗಿ ಹೆಸರನ್ನು ನೋಂದಾಯಿಸುವುದು ಹಾಗೂ 20 ಸಾವಿರ ರೂ. ಇ.ಎಂ.ಡಿ ಮೊತ್ತವನ್ನು ಮುಂಗಡವಾಗಿ ಪಾವತಿಸಬೇಕು. ಇ.ಎಂ.ಡಿ ಮೊತ್ತವನ್ನು ಜಿಲ್ಲಾಧಿಕಾರಿಗಳು ರಾಯಚೂರುರವರ ಹೆಸರಿನಲ್ಲಿ ಡಿಡಿ ಮೂಲಕ ಪಾವತಿಸತಕ್ಕದ್ದು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎರಡು ಪಾಸ್ ಪೋರ್ಟ್ ಸೈಜ್ ಭಾವಚಿತ್ರ, ಪರವಾನಿಗೆ ತಮ್ಮ ವ್ಯಾಪಾರಿ ನೋಂದಣಿ ಪತ್ರ, ಸಂಸ್ಥೆ ನೋಂದಣಿ ಪತ್ರ, ಆಧಾರ್ ಕಾರ್ಡಿನ ಪ್ರತಿಯನ್ನು ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ನಂತರ ಠೇವಣಿ ಮೊತ್ತವನ್ನು ಗರಿಷ್ಠ ಹಾಗೂ ಎರಡನೇ ಗರಿಷ್ಠ ಬಿಡ್ಡುದಾರರನ್ನು ಹೊರತುಪಡಿಸಿ ಉಳಿದ ಬಿಡ್ಡುದಾರರಿಗೆ ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಗರಿಷ್ಠ ಬಿಡ್ಡುದಾರರು ನಿಗಧತ ಅವಧಿಯೊಳಗೆ ಪೂರ್ಣ ಹಣವನ್ನು ಪಾವತಿಸಲು ವಿಫಲವಾದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ನಂತರ ಎರಡನೇ ಬಿಡ್ಡುದಾರರಿಗೆ ಅವಕಾಶ ಮಾಡಿಕೊಡಲಾಗು ವುದು ಇವರಿಗೆ ಸಹ ಇದೇ ನಿಯಮ ಅನ್ವಯವಾಗುತ್ತದೆ.

ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಪ್ರಕರಣಕ್ಕೆ ಒಳಗಾಗಿರುವ ವ್ಯಕ್ತಿ, ಸಂಸ್ಥೆಗಳು, ವ್ಯಾಪಾರಿಗಳು, ಸಾರ್ವಜನಿಕ ವಿತರಣಾ ಪದ್ದತಿ ವ್ಯವಸ್ಥೆಯಡಿ ಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ಎಲ್ಲಿದೆಯೋ ಅಲ್ಲಿ ಹಾಗೂ ಹೇಗಿವೆಯೋ ಹಾಗೆ ಷರತ್ತಿನಡಿ ಹರಾಜು ಮಾಡಲಾಗುತ್ತಿರುವುದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ದೇವದುರ್ಗ ತಾಲ್ಲೂಕಿನ ಸಗಟು ಗೋದಾಮುಗಳಿಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲನೆ ಮಾಡಿಕೊಳ್ಳಬಹುದಾಗಿದೆ. ಬಹಿರಂಗ ಹರಾಜಿನಲ್ಲಿ ಬರುವ ಸ್ಪರ್ಧಾತ್ಮಕ ದರಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ಈ ಹರಾಜವನ್ನು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಲಾಗಿದೆ.

ಬಹಿರಂಗ ಹರಾಜನ್ನು ತಹಶೀಲ್ದಾರರ ಕಚೇರಿ ದೇವದುರ್ಗನಲ್ಲಿ ನಿಗಧಿಪಡಿಸಲಾಗುತ್ತದೆ. ಬಿಡ್‌ನಲ್ಲಿ ನಮೂದಾಗುವ ದರಗಳನ್ನು ಜಿಲ್ಲಾಧಿಕಾರಿಗಳು ಅನುಮೋದಿಸಿದ ನಂತರ ಬಿಡ್‌ನ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶಿರ್ಷಿಕೆಗೆ ನಿಗದಿತ ದಿನಾಂಕದೊಳಗಾಗಿ ಜಮಾ ಮಾಡಿ, ಜಮಾ ಮಾಡಿದ ಚಲನನ್ನು ಹರಾಜುಪಡಿಸಿದ ನಂತರ ಹರಾಜಾದ ಪದಾರ್ಥ ಎತ್ತುವಳಿಗೆ ಅವಕಾಶ ನೀಡಲಾಗುವುದು.

ಎಪಿಎಂಸಿ ಸೆಸ್ ಮತ್ತು ಇತರೆ ಯಾವುದಾದರೂ ಶುಲ್ಕವನ್ನು ಸರ್ಕಾರಕ್ಕೆ ಕಟ್ಟಬೇಕಾದಲ್ಲಿ ಹರಾಜಿನಲ್ಲಿ ಆಯ್ಕೆಯಾದ ಬಿಡ್‌ದಾರರ ಪಾವತಿಸತಕ್ಕದ್ದು. ಬಹಿರಂಗ ಹರಾಜಾದ ಆಹಾರ ಧಾನ್ಯಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ 3 ದಿನಗಳಲ್ಲಿ ತಾಲ್ಲೂಕಿನ ಸಗಟು ಗೋದಾಮುಗಳಿಂದ ಎತ್ತುವಳಿ ಮಾಡತಕ್ಕದ್ದು.

ಹೆಚ್ಚಿನ ಮಾಹಿತಿ ಅಥವಾ ಷರತ್ತುಗಳನ್ನು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರ ಕಚೇರಿ ಅಥವಾ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಮತ್ತು ಜಿಲ್ಲೆಯ ತಹಶೀಲ್ದಾರರ ಕಚೇರಿಗಳಿಗೆ ಭೇಟಿ ನೀಡಿ ವಿವರಗಳನ್ನು ಪಡೆಯಬಹುದಾಗಿದೆ ಎಂದು ದೇವದುರ್ಗ ತಹಶೀಲ್ದಾರಾದ ನಾಗಮ್ಮ ಕಟ್ಟಿಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೇವೆಯಲ್ಲಿ ಪ್ರಾಮಾಣಿಕತೆ, ಬದ್ಧತೆ ಅಗತ್ಯ : ಬಟಗೇರಿ

**ಕಲಬುರಗಿ : ಎ.1:**ಸರ್ಕಾರಿ ನೌಕರಿ ಪಡೆಯುವುದೇ ದೊಡ್ಡ ಸಾಧನೆಯಲ್ಲ. ದೊರೆತ ಹುದ್ದೆಗೆ ನ್ಯಾಯ ದೊರಕಿಸಿ ಕೊಡುವುದು ಅಗತ್ಯ. ಸೇವೆಯಲ್ಲಿ ಪ್ರಾಮಾಣಿಕತೆ, ಬದ್ಧತೆ, ಕರ್ತವ್ಯನಿಷ್ಟೆಯಿಂದ ಕಾರ್ಯನಿರ್ವಹಸಿದರೆ ಆತ್ಮತೃಪ್ತಿ ದೊರೆಯುವುದರ ಜೊತೆಗೆ, ಅಂತಹ ಸೇವೆ ನಿಜಕ್ಕೂ ಸಾರ್ಥಕತೆ ಪಡೆಯಲು ಸಾಧ್ಯವಿದೆ. ಹುದ್ದೆಗೆ ನ್ಯಾಯ ಒದಗಿಸುವುದು, ಸಂಸ್ಥೆಯನ್ನು ಬೆಳೆಸುವುದು ಅಗತ್ಯವಾಗಿದೆ ಎಂದು ಪ್ರಾಚಾರ್ಯ ರವೀಂದ್ರಕುಮಾರ ಸಿ.ಬಟಗೇರಿ ಹೇಳಿದರು.

ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ನಿಮಿತ್ಯ ಮಂಗಳವಾರ ಕಾಲೇಜಿನಲ್ಲಿ ತಮಗೆ ಜರುಗಿದ ಸತ್ಕಾರ ಕಾರ್ಯಕ್ರಮದಲ್ಲಿ ಗೌರವ ಸ್ವೀಕರಿಸಿ, ಅವರು ಮಾತನಾಡಿದರು.

ನೂತನ ಪ್ರಾಚಾರ್ಯರಾಗಿ ಅಧಿಕಾರ ಸ್ವೀಕರಿಸಿದ ಮಲ್ಲಿಕಾರ್ಜುನ ದೊಡ್ಡಮನಿ ಮಾತನಾಡಿ, ಬಟಗೇರಿಯವರು ತುಂಬಾ ಶ್ರದ್ಧೆಯಿಂದ ಕರ್ತವ್ಯ ನಿರ್ವಹಸಿದ್ದಾರೆ. ಅವರ ಅವಧಿಯಲ್ಲಿ ಕಾಲೇಜು ಸಾಕಷ್ಟು ಅಭಿವೃದ್ಧಿ ಕಂಡಿದೆ. ಎಲ್ಲರೊಂದಿಗೆ ಬೆರೆಯುವ ಸರಳ ಸ್ವಭಾವ ಇವರದಾಗಿತ್ತು. ವಿದ್ಯಾರ್ಥಿಗಳನ್ನು ತಮ್ಮ ಸ್ವಂತ ಮಕ್ಕಳಂತೆ ಕಾಳಜಿ ವಹಿಸುತ್ತಿದ್ದರು. ಅವರ ಆಡಳಿತ




ಮಾದರಿಯಾಗಿದ್ದು, ನಾನು ಅದನ್ನು ಮುಂದುವರೆಸಿಕೊಂಡು ಹೋಗುತ್ತೇನೆ. ಅದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಚಾರ್ಯ ಮೊಹಮ್ಮದ್ ಅಲ್ಲಾಉದ್ದೀನ್ ಸಾಗರ, ಜೈಭೀಮ, ಶಿಕ್ಷಣ ಪ್ರೇಮಿ ಬಸವರಾಜ ಹಡಪದ, ಕಾಲೇಜಿನ ಉಪನ್ಯಾಸಕರಾದ ನಯಿಮಾ ನಾಹಿದ್, ಶಂಕ್ರೆಪ್ಪ ಹೊಸದೊಡ್ಡಿ, ಎಚ್.ಬಿ.ಪಾಟೀಲ್, ಮಲ್ಲಪ್ಪ ರಂಜಣಗಿ, ದುಂಡಪ್ಪ ಯರಗೋಳ, ಕೀರ್ತಿ ಭುಜುರಕೆ, ಗ್ರಂಥಾಪಾಲಕ ಲಿಂಗರಾಜ ಹಿರೇಗೌಡ, ಪ್ರದಸ ಪ್ರೇಮಾ ಸುರಪುರ, ದ್ವಿದಸ ರಾಮಚಂದ್ರ ಚವ್ಹಾಣ, ಕಲಬುರಗಿಯ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಮಲ್ಲಯ್ಯ ಮಠಪತಿ, ರೇಣುಕಾ ಚಿಕ್ಕಮೇಟಿ, ಪ್ರದಸ ನೇಸರ ಎಂ.ಬೀಳಗಿಮಠ, ಸೇವಕ ಭಾಗಣ್ಣ ಹರನೂರ, ಯಮನಪ್ಪ, ಮಹಾಂತೇಶ್ ಸೇರಿದಂತೆ ಇನ್ನಿತರರಿದ್ದರು

## ಏಪ್ರಿಲ್ 08ರಂದು ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳೊಂದಿಗೆ ಸಭೆ

**ರಾಯಚೂರು:** ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಏಪ್ರಿಲ್ 8ರ ಬೆಳಿಗ್ಗೆ 10.30ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಭೆಗೆ ಅಗತ್ಯ ಮಾಹಿತಿ ಹಾಗೂ ದಾಖಲೆಗಳೊಂದಿಗೆ ಸಂಬಂದಪಟ್ಟ ಅಧಿಕಾರಿಗಳು ಖುದ್ದಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಮಕ್ಕಳಿಂದ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು:** ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2026–27ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ, ಮಾಜಿ ಸೈನಿಕರಿಗೆ 33 ರಿಂದ ಗರಿಷ್ಟ 65 ವರ್ಷ ಹಾಗೂ ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 30 ವರ್ಷದ ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ / ತಾಯಿ / ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರು ಪ್ರವೇಶ ಪಡೆಯಲು ಇಚ್ಚಿಸಿದಲ್ಲಿ ಮೇಲೆ ತಿಳಿಸಿದ ವಿವರಗಳೊಂದಿಗೆ ಇತರೆ ದಾಖಲಾತಿಗಳಾದ Discharge book copy, Personal Pension Order copy, Ex. Serviceman ID card copy ಇತ್ಯಾದಿಗಳನ್ನು ಸಲ್ಲಿಸಬೇಕು.

ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುರಾಜ್ಯವಲಯ, ರಾಯಚೂರುಕಛೇರಿ ಅಥವಾ ಇಲಾಖೆಯ ವೆಬ್‌ಸೈಟ್ ವಿಳಾಸ: https://horticulturedir.karnataka.gov.in ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರಿಲ್ 15ರ ಸಂಜೆ 05.30ರೊಳಗಾಗಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ರಾಜ್ಯ ವಲಯ, ರಾಯಚೂರು ಅಥವಾ ದೂರವಾಣಿ ಸಂಖ್ಯೆ: 9844621424ಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ರಾಜ್ಯ ವಲಯದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಶದಲ್ಲೇ ಮೊದಲ ಬಾರಿಗೆ ರಾಯಚೂರಿನಲ್ಲಿ ತೇಜಸ್ ಸ್ಟಾರ್ಟ್ ಆಪ್ ಇಂಡಿಯಾ ಕಾರ್ಯಾಗಾರ: ಜಿಲ್ಲೆಯ ಉದ್ಯಮಶೀಲತೆಗಾಗಿ ಮಹತ್ವದ ಉತ್ತೇಜನ

ಧೈರ್ಯದ ದಾರಿ



**ರಾಯಚೂರು:**ಗ್ರಾಮೀಣ ಮಟ್ಟದಲ್ಲಿ ನವೀನತೆಯನ್ನು ಉತ್ತೇಜಿಸಲು ಹಾಗೂ ಮಹಾನಗರಗಳ ಹೊರತಾಗಿ ಭಾರತದ ಉದ್ಯಮಶೀಲ ಪರಿಸರವನ್ನು ವಿಸ್ತರಿಸಲು ಮಹತ್ವದ ಹೆಜ್ಜೆಯಾಗಿ, ಭಾರತ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಉದ್ಯಮ ಮತ್ತು ಆಂತರಿಕ ವ್ಯಾಪಾರ ಉತ್ತೇಜನ ಇಲಾಖೆ (ಡಿಪಿಐಐಟಿ) ತನ್ನ ಸ್ಟಾರ್ಟ್ ಆಪ್ ಇಂಡಿಯಾ ಉಪಕ್ರಮದಡಿ ತೇಜಸ್ಸಾ (TEJAS Transforming Entrepreneurial Journeys Across States & Districts ರ್ಯಕ್ರಮವನ್ನು ಜಾರಿಗೆ ತರುತ್ತಿದೆ.

ಈ ಉಪಕ್ರಮವು ವಿಕಸಿತ ಭಾರತ@2047 ಎಂಬ ರಾಷ್ಟ್ರೀಯ ದೃಷ್ಟಿಕೋನಕ್ಕೆ ಅನುಗುಣವಾಗಿ, ಗ್ರಾಮೀಣ ಮಟ್ಟದಲ್ಲಿ ಉದ್ಯಮಶೀಲತೆಯನ್ನು ಉತ್ತೇಜಿಸುವುದು ಮತ್ತು ಜಿಲ್ಲಾ ಮಟ್ಟದ ಆರ್ಥಿಕ ಬೆಳವಣಿಗೆಯನ್ನು ಬಲಪಡಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

ಖಿಇಎಂಖ ಕಾರ್ಯಕ್ರಮವು ಸ್ಟಾರ್ಟ್ ಆಪ್ ಇಂಡಿಯಾ ಆರಂಭದ ವೇಳೆ ವ್ಯಕ್ತಪಡಿಸಿದ ದೃಷ್ಟಿಯಿಂದ ಪ್ರೇರಿತವಾಗಿದ್ದು, ಉದ್ಯಮಶೀಲತೆ ನಗರಗಳಿಗೆ ಮಾತ್ರ ಸೀಮಿತವಾಗದೇ ದೇಶದ ಪ್ರತಿಯೊಂದು ಭಾಗದಲ್ಲೂ ಬೆಳೆಯಬೇಕು ಎಂಬ ಉದ್ದೇಶ ಹೊಂದಿದೆ. ಯುವಕರು, ನವೋದ್ಯಮಿಗಳು ಮತ್ತು ಉದ್ಯೋಗ ಸೃಷ್ಟಿಕರ್ತರನ್ನು ಉತ್ತೇಜಿಸುವ ಮೂಲಕ ಸಣ್ಣ ಪಟ್ಟಣಗಳು, ಗ್ರಾಮೀಣ ಪ್ರದೇಶಗಳು ಮತ್ತು ಆಕಾಂಕ್ಷಿ ಜಿಲ್ಲೆಗಳಲ್ಲಿ ಸ್ಟಾರ್ಟ್ ಆಪ್‌ಗಳು ಉದಯಕ್ಕೆ ದಾರಿಯಾಗಲಿದೆ.

ಈ ಕಾರ್ಯಕ್ರಮವನ್ನು ದೇಶದಾದ್ಯಂತ 132 ಜಿಲ್ಲೆಗಳಲ್ಲಿ ಜಾರಿಗೆ ತರಲಾಗುತ್ತಿದ್ದು, ಜಿಲ್ಲಾಮಟ್ಟದ ಕಾರ್ಯಾಗಾರಗಳ ಮೂಲಕ ತಳಮಟ್ಟದವರೆಗೆ ಸ್ಟಾರ್ಟ್ ಆಪ್ ಬೆಂಬಲವನ್ನು ತಲುಪಿಸಲಾಗುತ್ತದೆ. ಇದು ಸರ್ಕಾರದ ಯೋಜನೆಗಳ ಅರಿವು ಹೆಚ್ಚಿಸುವುದು, ಇಂಕ್ಯುಬೇಷನ್ ಮತ್ತು ಮಾರ್ಗದರ್ಶನ ಸೌಲಭ್ಯಗಳಿಗೆ ಪ್ರವೇಶ ಕಲ್ಪಿಸುವುದು, ಹಾಗೂ ಸ್ಥಳೀಯ ನವೋದ್ಯಮಿಗಳನ್ನು ಮಾರುಕಟ್ಟೆ ಅವಕಾಶಗಳೊಂದಿಗೆ ಸಂಪರ್ಕಿಸುವುದನ್ನು ಉದ್ದೇಶಿಸಿದೆ.

ರಾಯಚೂರಿನಲ್ಲಿ ತೇಜಸ್ ಕಾರ್ಯಾಗಾರ ದೇಶದಲ್ಲೇ ಮೊದಲ ಬಾರಿ: ಈ ರಾಷ್ಟ್ರವ್ಯಾಪಿ ಉಪಕ್ರಮದ ಭಾಗವಾಗಿ ಸ್ಟಾರ್ಟ್ ಆಪ್ ಇಂಡಿಯಾ, ಡಿಪಿಐಐಟಿ ಭಾರತ ಸರ್ಕಾರ, ಹಾಗೂ ಜಿಲ್ಲಾಡಳಿತ ರಾಯಚೂರು ಇವರ ಸಹಯೋಗದಲ್ಲಿ 2026ರ ಏಪ್ರಿಲ್ 2ರಂದು ತೇಜಸ್ ಸ್ಟಾರ್ಟ್ ಆಪ್ ಕಾರ್ಯಾಗಾರವನ್ನು ರಾಯಚೂರಿನಲ್ಲಿ ಆಯೋಜಿಸಲಾಗುತ್ತಿದೆ.

ವಿಶೇಷವಾಗಿ ಈ ಕಾರ್ಯಾಗಾರವು ದೇಶದಲ್ಲೇ ಮೊದಲ ಬಾರಿಗೆ ರಾಯಚೂರಿನಲ್ಲಿ ಆಯೋಜಿಸಲಾಗುತ್ತಿದ್ದು, ಇದು ಭಾರತದ ಉದ್ಯಮಶೀಲತೆಯನ್ನು ತಳಮಟ್ಟಕ್ಕೆ ತಲುಪಿಸುವ ಪ್ರಯತ್ನದಲ್ಲಿ ಮಹತ್ವದ ಮೈಲುಗಲ್ಲಾಗಿದೆ. ರಾಯಚೂರು ಒಂದು ಆಕಾಂಕ್ಷಿ ಜಿಲ್ಲೆಯಾಗಿದ್ದು, ಅಪಾರ ಉದ್ಯಮಶೀಲ ಸಾಮರ್ಥ್ಯವನ್ನು ಹೊಂದಿದೆ. ಯುವಕರು, ಮಹಿಳೆಯರು ಮತ್ತು ಮೊದಲ ಬಾರಿಗೆ ಉದ್ಯಮ ಆರಂಭಿಸುವವರಿಗೆ ಅವಕಾಶಗಳನ್ನು ಒದಗಿಸುವ ಮೂಲಕ ಬಲಿಷ್ಠ ಸ್ಟಾರ್ಟ್ ಆಪ್ ಪರಿಸರವನ್ನು ನಿರ್ಮಿಸಲು ಜಿಲ್ಲಾಡಳಿತ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ.

ಈ ಕಾರ್ಯಾಗಾರವು ಆಸಕ್ತ ಉದ್ಯಮಿಗಳು, ವಿದ್ಯಾರ್ಥಿಗಳು, ನವೋದ್ಯಮಿಗಳು, ಕೈಗಾರಿಕಾ ತಜ್ಞರು ಮತ್ತು ಪರಿಸರ ಸಹಭಾಗಿಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಜ್ಞಾನ ಹಂಚಿಕೆ, ಮಾರ್ಗದರ್ಶನ ಮತ್ತು ನೆಟ್ವರ್ಕಿಂಗ್ಗೆ ಅವಕಾಶ ಕಲ್ಪಿಸುತ್ತದೆ. ಪ್ರಮುಖ ಅಧಿವೇಶನಗಳು ಸ್ಟಾರ್ಟ್ ಆಪ್ ಆಲೋಚನೆ ರೂಪಿಸುವಿಕೆ, ವಿಸ್ತರಣೆ ತಂತ್ರಗಳು, ಹಣಕಾಸು ಅವಕಾಶಗಳು, ಇಂಕ್ಯುಬೇಷನ್ ಬೆಂಬಲ ಮತ್ತು ಸರ್ಕಾರದ ಯೋಜನೆಗಳ ಕುರಿತು ಕೇಂದ್ರೀಕರಿಸಲಿವೆ.

ಈ ಉಪಕ್ರಮವು ರಾಜ್ಯ ಸರ್ಕಾರಗಳು, ಕೇಂದ್ರ ಸಚಿವಾಲಯಗಳು, ಹಣಕಾಸು ಸಂಸ್ಥೆಗಳು, ಇಂಕ್ಯುಬೇಟರ್ಗಳು, ಶಿಕ್ಷಣ ಸಂಸ್ಥೆಗಳು ಮತ್ತು ಕೈಗಾರಿಕಾ ಸಹಭಾಗಿಗಳ ಸಹಯೋಗದಲ್ಲಿ ಜಾರಿಗೆ ತರಲಾಗುತ್ತಿದೆ. ಜಿಲ್ಲಾಡಳಿತ, ರಾಯಚೂರು ಎಲ್ಲಾ ಆಸಕ್ತರು, ಉದ್ಯಮಶೀಲರು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಜಿಲ್ಲಾಧಿಕಾರಿಗಳ ಹೇಳಿಕೆ: ದೇಶದಲ್ಲೇ ಮೊದಲ ಬಾರಿಗೆ ತೇಜಸ್ ಕಾರ್ಯಾಗಾರವನ್ನು ರಾಯಚೂರಿನಲ್ಲಿ ಆಯೋಜಿಸಲಾಗುತ್ತಿರುವುದು ನಮ್ಮ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ. ಈ ಐತಿಹಾಸಿಕ ಉಪಕ್ರಮದ ಮೂಲಕ ರಾಯಚೂರನ್ನು ತಳಮಟ್ಟದ ನವೀನತೆ ಮತ್ತು ಉದ್ಯಮಶೀಲತೆಯ ಪ್ರಮುಖ ಕೇಂದ್ರವಾಗಿ ರೂಪಿಸುವುದೇ ನಮ್ಮ ಉದ್ದೇಶವಾಗಿದೆ. ನಮ್ಮ ಯುವಕರ ಸಾಮರ್ಥ್ಯವನ್ನು ಹೊರತರಲು,

ಮೊದಲ ತಲೆಮಾರಿನ ಉದ್ಯಮಿಗಳನ್ನು ಉತ್ತೇಜಿಸಲು ಹಾಗೂ ಸಮಗ್ರ ಮತ್ತು ಸ್ಥಿರ ಆರ್ಥಿಕ ಬೆಳವಣಿಗೆಗೆ ದಾರಿ ಮಾಡಿಕೊಡುವ ಬಲಿಷ್ಠ ಸ್ಟಾರ್ಟ್ ಆಪ್ ಪರಿಸರ ನಿರ್ಮಾಣಕ್ಕೆ ನಾವು ಬದ್ಧರಾಗಿದ್ದೇವೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

# ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ರಾಯಚೂರು ಜಿಲ್ಲಾ ಪ್ರವಾಸ

ಧೈರ್ಯದ ದಾರಿ

**ರಾಯಚೂರು :**ಭಾರತ ಸರ್ಕಾರದ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು 2026ರ ಏಪ್ರಿಲ್ 4ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮ ಕೈಗೊಂಡಿದ್ದಾರೆ. ಅವರು ಏಪ್ರಿಲ್ 4ರ ಬೆಳಿಗ್ಗೆ 9ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ಹೆಲಿಕ್ಯಾಪ್ಟರ್ ಮೂಲಕ ನಿರ್ಗಮಿಸಿ, ಬೆಳಿಗ್ಗೆ 11ಗಂಟೆಗೆ ರಾಯಚೂರು ಜಿಲ್ಲೆಯ ಸಿಂಧನೂರಿನ ಹೆಲಿಪ್ಯಾಡ್ ಆಗಮಿಸುವರು. ಬಳಿಕ 11.30ಕ್ಕೆ ಸಿಂಧನೂರಿನ ಶ್ರೀಕೃಷ್ಣದೇವರಾಯ ಸೈನಿಕ ಶಾಲೆಗೆ ರಸ್ತೆ ಮೂಲಕ ಪ್ರಯಾಣಿಸಿ, ಶ್ರೀಕೃಷ್ಣದೇವರಾಯ ಸೈನಿಕ ಶಾಲೆಯ ಅದ್ದೂರಿ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 2ಗಂಟೆಗೆ ಸಿಂಧನೂರಿನ ಶ್ರೀಕೃಷ್ಣದೇವರಾಯ ಸೈನಿಕ ಶಾಲೆಯಿಂದ ರಸ್ತೆ ಮೂಲಕ ಸಿಂಧನೂರಿನ ಹೆಲಿಪ್ಯಾಡ್‌ಗೆ ಆಗಮಿಸಿ, 2.30ಗಂಟೆಗೆ ಹೆಲಿಕ್ಯಾಪ್ಟರ್ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಅಮರೇಶ ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶಾದ್ಯಂತ ಜನಗಣತಿ ಕಾರ್ಯಕ್ಕೆ ಚಾಲನೆ

**ನವದೆಹಲಿ,ಏ.1–** ದೇಶಾದ್ಯಂತ ಇಂದಿನಿಂದ ಜನಗಣತಿ ಜೊತೆಗೆ ಜಾತಿಗಣತಿ ಕಾರ್ಯ ಆರಂಭವಾಗಿದ್ದು ಮೊದಲ ಹಂತ ಸೆಪ್ಟಂಬರ್ 30ರ ತನಕ ನಡೆಯಲಿದೆ, ಈ ಅವಧಿಯಲ್ಲಿ ಮನೆ ಪಟ್ಟಿ ನಡೆಯಲಿದೆ. ಬಳಿಕ ಜನಗಣತಿ ನಡೆಯಲಿದ್ದು 33 ಪ್ರಶ್ನೆಗಳನ್ನು ಕೇಂದ್ರ ಗೃಹ ಸಚಿವಾಲಯ ಸಿದ್ದಪಡಿಸಿದ್ದು ಎಲ್ಲಾ ರಾಜ್ಯಗಳು ಮತ್ತು

ಕೇಂದ್ರಾಡಳಿತ ಪ್ರದೇಶಗಳಲ್ಲಿ ಜಿಲ್ಲಾಡಳಿತಗಳು ಸಕಲ ಸಿದ್ದತೆ ಮಾಡಿಕೊಂಡಿವೆ.

ಏಪ್ರಿಲ್ 1 ರಿಂದ ಸೆಪ್ಟೆಂಬರ್ 30 ರವರೆಗೆ ನಡೆಯಲಿರುವ ಮೊದಲ ಹಂತದ ಗಣತಿ ಕಾರ್ಯಕ್ಕೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು 30 ದಿನಗಳ ಅವಧಿಯಲ್ಲಿ ನಡೆಸುತ್ತದೆ. ಎರಡನೇ ಹಂರ ಮುಂದಿನ ವರ್ಷ ಮಾರ್ಚ್ 1 ರಿಂದ ನಡೆಯಲಿದ್ದು ಜನಗಣತಿ. ಜೊತೆಗೆ ಜಾತಿ ಗಣತಿ ನಡೆಯಲಿದೆ

ಮೊದಲ ಹಂತದಲ್ಲಿ ಮನೆ ಪಟ್ಟಿ ಕಾರ್ಯ ನಡೆಯಲಿದ್ದು ಮುಂದಿನ ಹಂತಕ್ಕೆ ಡೇಟಾ ಸಂಗ್ರಹಕ್ಕೆ ಸಹಕಾರಿಯಾಗಲಿದೆ ಮನೆ ಪಟ್ಟಿ ಬಳಿಕ ಜನಗಣತಿ ನಡೆಯಲಿದೆ. ಈ ಅವಧಿಯಲ್ಲಿ ಜನರು 33 ಪ್ರಶ್ನೆಗಳಿಗೆ ಉತ್ತರ ನೀಡಬೇಕಾಗಿದೆ. ಈ ಪ್ರಶ್ನೆಗಳಲ್ಲಿ ಮನೆ, ಜೀವನ ಪರಿಸ್ಥಿತಿ ಮತ್ತು ಮೂಲಭೂತ ಸೌಕರ್ಯಗಳ ಸೇರಿದಂತೆ ಹಲವು ಪ್ರಶ್ನೆಗಳನ್ನು ಒಳಗೊಂಡಿದೆ.

ಜನಗಣತಿ ಮತ್ತು ಜಾತಿಗಣತಿಯ ಸಮಯದಲ್ಲಿ ಜನರು ನೀಡುವ ಪ್ರತಿಯೊಂದು ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು. ಈ ಮಾಹಿತಿಯನ್ನು ಆದಾಯ ತೆರಿಗೆ ಅಥವಾ ಸರ್ಕಾರದ ಯಾವುದೇ ಸಂಸ್ಥೆಗಳಿಗೆ ನೀಡುವುದಿಲ್ಲ, ಹೀಗಾಗಿ ಜನರು ಆತಂಕಕ್ಕೆ ಒಳಗಾಗುವುದು ಬೇಡ ಎಂದು ಭಾರತೀಯ ಜನಗಣತಿ ಆಯುಕ್ತಾಲಯ ಮಾಹಿತಿ ಹಂಚಿಕೊಂಡಿದೆ.

ಭಾರತದ ಜನಗಣತಿ ಆಯುಕ್ತ ಮೃತ್ಯುಂಜಯ್ ಕುಮಾರ್ ನಾರಾಯಣ್ ಮಾತನಾಡಿ, ಜನಗಣತಿ ಸಂದರ್ಭದಲ್ಲಿ ಕುಟುಂಬದಲ್ಲಿ ವಾಸಿಸುವ ಜನರ ಸಂಖ್ಯೆ, ಕಟ್ಟಡದ ಮಾಲೀಕತ್ವದ ವಿವರ, ಮನೆಯಲ್ಲಿ ಕೊಠಡಿಗಳ ಸಂಖ್ಯೆ ಸೇರಿದಂತೆ ಅಗತ್ಯ ಮಾಹಿತಿ ಸಂಗ್ರಹ ಮಾಡಲಾಗುತ್ತಿದೆ ಎಂದಿದ್ದಾರೆ

ಜೊತೆಗೆ ಕುಡಿಯುವ ನೀರಿನ ಲಭ್ಯತೆ ಮತ್ತು ಮುಖ್ಯ ಮೂಲ, ಲಭ್ಯವಿದ್ದರೆ ಅದರ ಬಗ್ಗೆ ಮತ್ತು, ವಿದ್ಯುತ್ ಮೂಲ, ಶೌಚಾಲಯದ ಪ್ರವೇಶ ಮತ್ತು ತ್ಯಾಜ್ಯ ನಿರ್ವಹಣೆ, ಹಾಗೆಯೇ ಪ್ರಾಥಮಿಕ ಅಡುಗೆ ಇಂಧನವಾಗಿ ಬಳಸುವ ಅನಿಲ ಸಂಪರ್ಕಗಳ ಪ್ರಕಾರ ಸೇರಿದಂತೆ ಸೌಲಭ್ಯಗಳ ಬಗ್ಗೆಯೂ ಗಣತಿದಾರರು ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ಹೇಳೀದ್ದಾರೆ

ಜನರು ರೇಡಿಯೋಗಳು ಅಥವಾ ದೂರದರ್ಶನಗಳಂತಹ ವಸ್ತು ಹೊಂದಿದ್ದಾರೆಯೇ, ಅವರ ಇಂಟರ್ನೆಟ್ ಸೌಲಭ್ಯ ಕಂಪ್ಯೂಟರ್‌ಗಳು, ಮೊಬೈಲ್ ಫೋನ್ ಹೊಂದಿದ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತುದೆ, ಮತ್ತು ನೋಂದಾಯಿತ ನಾಲ್ಕು ಅಥವಾ ದ್ವಿಚಕ್ರ ವಾಹನಗಳ ಬಗ್ಗೆಯೂ ಕೇಳಲಾಗುತ್ತದೆ. ಜೊತೆಗೆ 16 ಭಾಷೆಗಳಲ್ಲಿ ಲಭ್ಯವಿರುವ ಫಾರ್ಮ್‌ಗಳ ಮೂಲಕವೂ ಉತ್ತರಗಳನ್ನು ಸಲ್ಲಿಸಬಹುದಾಗಿದೆ ಎಂದಿದ್ಧಾರೆ

30 ಲಕ್ಷ ಗಣತಿದಾರರು–ಜನಗಣತಿ ಕಾರ್ಯಕ್ಕೆ ದೇಶಾದ್ಯಂತ 30 ಲಕ್ಷಕ್ಕೂ ಅಧಿಕ ಗಣತಿದಾರರನ್ನು ಬಳಸಿಕೊಳ್ಳಲಾಗಿದೆ. ಸರಿ ಸುಮಾರು 12 ಸಾವಿರ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಮಾಹಿತಿ ನೀಡಿದೆ

ಅಂದಾಜು 30 ಲಕ್ಷ ಜನಗಣತಿ ನಿರ್ವಾಹಕರು ವಿಶೇಷವಾಗಿ ಅಭಿವೃದ್ಧಿಪಡಿಸಿದ ಮೊಬೈಲ್ ಫೊ?ನ್ ಅಪ್ಲಿಕೇಶನ್‌ಗಳನ್ನು ಬಳಸಇ ಗಣತಿ ಮಾಡಲಿದ್ದಾರೆ. ಐಫೋನ್‌ಗಳು ಮತ್ತು ಆಂಡ್ರಾಯ್ಡ್ ಸಾಧನಗಳಿಗೆ ಲಭ್ಯವಿದೆ ಮತ್ತು ಇಂಟರ್ನೆಟ್ ಸಂಪರ್ಕವಿಲ್ಲದೆ ಕಾರ್ಯನಿರ್ವಹಿಸಬಹುದಾಗಿದೆ. ಎಲ್ಲಾ ಮಾಹಿತಿ ಗೌಪ್ಯವಾಗಿಡಲಾಗುತ್ತಿದೆ ಎಂದು ತಿಳಿಸಿದೆ.

ಮಾರ್ಚ್ 1 ರಿಂದ ಎರಡನೇ ಹಂತ–ಮೊದಲ ಹಂತ ಇಂದಿನಿಂದ ಸೆಪ್ಟಂಬರ್ 30ರ ತನಕ ನಡೆಯಲಿದ್ದು ಎರಡೇ ಹಂತದ ಗಣತಿ ಕಾರ್ಯ 2027ರ ಮಾರ್ಚ್ 1 ರಿಂದ ನಡೆಯಲಿದೆ ಎಂದು ಭಾರತೀಯ ಜನಗಣತಿ ಆಯುಕ್ತಾಲಯ ಮಾಹಿತಿ ನೀಡಿದೆ.ಮೊದಲ ಹಂತ ಮುಕ್ತಾಯವಾದ ನಂತರ ಈ ವರ್ಷದ ಅಕ್ಟೋಬರ್ ತಿಂಗಳಿಂದ ಲಡಾಖ್, ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಂತಹ ಹಿಮದಿಂದ ಆವೃತವಾದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಗಣತಿ ನಡೆಯಲಿದೆ

ಈ ಹಂತದಲ್ಲಿ ವ್ಯಕ್ತಿಯ ಜಾತಿ ಮತ್ತು ಉಪ–ಜಾತಿಯ ಬಗ್ಗೆ ಪ್ರಶ್ನೆಗಳಿರುತ್ತವೆ. ಜಾತಿ ಎಣಿಕೆ ಕಾರ್ಯ ನಡೆಯಲಿದೆ. ಐತಿಹಾಸಿಕವಾಗಿ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಚಲನಶೀಲತೆ ರೂಪಿಸಿದೆ, ಜಾತಿ ದತ್ತಾಂಶ ಜನಸಂಖ್ಯಾ ವಿತರಣೆ, ಸಾಮಾಜಿಕ–ಆರ್ಥಿಕ ಪರಿಸ್ಥಿತಿಗಳು ಮತ್ತು ವಿವಿಧ ಜಾತಿ ಗುಂಪುಗಳ ಪ್ರಾತಿನಿಧ್ಯದ ಬಗ್ಗೆ ಒಳನೋಟ ಒಳಗೊಂಡಿದೆ ಎಂದು ಹೇಳಲಾಗಿದೆ

# ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ: ಆರೋಪಿಗೆ 20 ವರ್ಷ ಜೈಲು ಶಿಕ್ಷೆ

**ಕಲಬುರಗಿ,ಏ.1**–ಅಪ್ರಾಪ್ತ ವಯಸ್ಸಿನ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ ಆರೋಪಿಗೆ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೊಕ್ಸೋ) ನ್ಯಾಯಾಲಯ 20 ವರ್ಷ ಜೈಲು ಶಿಕ್ಷೆ ಮತ್ತು 2.50 ಲಕ್ಷ ದಂಡ ವಿಧಿಸಿದೆ.
ಭೀಮಾಶಂಕರ ತಂದೆ ದಶರಥ ಹಕ್ಕಿ (28) ಶಿಕ್ಷೆಗೆ ಗುರಿಯಾದ ಆರೋಪಿ.
ಆರೋಪಿ ಅಪ್ರಾಪ್ತ ವಯಸ್ಸಿನ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ವೆಸಗಿದ ಬಗ್ಗೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲಾಗಿತ್ತು. ಪಿಐ ಸುಶೀಲಕುಮಾರ ಅವರು ತನಿಖೆ ನಡೆಸಿ ಆರೋಪಿ ವಿರುದ್ಧ ಬಿಎಸ್‌ಎಸ್ ಮತ್ತು ಪೊಕ್ಸೋ ಕಾಯ್ದೆ ಅಡಿಯಲ್ಲಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.
ಪ್ರಕರಣದ ವಿಚಾರಣೆ ನಡೆಸಿದ ಅಪರ ಜಿಲ್ಲಾ ಮತ್ತು ಸತ್ರ (ವಿಶೇಷ ಪೊಕ್ಸೋ) ನ್ಯಾಯಾಲಯದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಸಿ.ಜಿ.ಅವರು ಪೊಕ್ಸೋ ಕಾಯ್ದೆ ಅಡಿಯಲ್ಲಿ ಅಪರಾಧಕ್ಕೆ ಆರೋಪಿಗೆ 20 ವರ್ಷ ಜೈಲು ಶಿಕ್ಷೆ ಮತ್ತು 2.50 ಲಕ್ಷ ದಂಡ ವಿಧಿಸಿ ತೀರ್ಪು ನೀಡಿದ್ದಾರೆ.ತೀರ್ಪಿನ ದಿನಾಂಕದಿಂದ 1 ತಿಂಗಳ ಅವಧಿಯೊಳಗೆ ನೊಂದ ಬಾಲಕಿಗೆ ಕಾನೂನು ಪ್ರಾಧಿಕಾರದ ವತಿಯಿಂದ 3 ಲಕ್ಷ ಪರಿಹಾರ ನೀಡಬೇಕೆಂದು ನ್ಯಾಯಾಧೀಶರು ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ವಿಶೇಷ ಸರಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ವಾದ ಮಂಡಿಸಿದ್ದರು.

# ದೇವಸ್ಥಾನ ಬೀಗ ಮುರಿದು ಬೆಳ್ಳಿ ಮೂರ್ತಿ, ಚಿನ್ನಾಭರಣ ಕಳವು

ಕಲಬುರಗಿ,ಏ.1–ನಗರದ ಅಡ್ವೋಕೇಟ್ ಕಾಲೋನಿಯಲ್ಲಿರುವ ಮಹಾಲಕ್ಷ್ಮೀ ದೇವಸ್ಥಾನದ ಬಾಗಿಲಿನ ಕೊಂಡಿ ಮುರಿದು ಕಳ್ಳರು ದೇವಿಯ ಬೆಳ್ಳಿ ಮೂರ್ತಿ ಸೇರಿ 1.37 ಲಕ್ಷ ರೂಪಾಯಿ ಮೌಲ್ಯದ ಬಂಗಾರದ ಆಭರಣ ಮತ್ತು ಬೆಳ್ಳಿ ದೋಚಿಕೊಂಡು ಹೋಗಿದ್ದಾರೆ.ಈ ಸಂಬಂಧ ಮಹಾಲಕ್ಷ್ಮೀ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಮಂಜುನಾಥ ಜೇವರಗಿ ಅವರು ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.
ದೇವಸ್ಥಾನದ ಬಾಗಿಲಿನ ಕೊಂಡಿ ಮುರಿದು ಕಳ್ಳರು ಮಹಾಲಕ್ಷ್ಮೀ ದೇವಿಮೂರ್ತಿ ಕೊರಳಲ್ಲಿನ 91 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ ತಾಳಿ, ಮಹಾಲಕ್ಷ್ಮೀ ದೇವಿಯ ಹಳೆಯ ಮೂರ್ತಿಯ ಕೊರಳಲ್ಲಿನ 26 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ತಾಳಿ, 20 ಸಾವಿರ ರೂ.ಮೌಲ್ಯದ 100 ಗ್ರಾಂ.ಬೆಳ್ಳಿಯ ಮೂರ್ತಿ ಸೇರಿ 1.37 ಲಕ್ಷ ರೂ.ಮೌಲ್ಯದ ಚಿನ್ನ ಮತ್ತು ಬೆಳ್ಳಿ ದೋಚಿಕೊಂಡು ಹೋಗಿದ್ದಾರೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಡಿಜಿಟಲ್ ಅಡಿಕ್ಷನ್ ನಿಯಂತ್ರಣಕ್ಕೆ ಕರಡು ಸಿದ್ಧ



**ಬೆಂಗಳೂರು, ಏ.1:** ರಾಜ್ಯದಲ್ಲಿ ಹೆಚ್ಚುತ್ತಿರುವ ಡಿಜಿಟಲ್ ಅಡಿಕ್ಷನ್ ಸಮಸ್ಯೆಯನ್ನು ಗಮನದಲ್ಲಿಟ್ಟುಕೊಂಡು ಜವಾಬ್ದಾರಿಯುತ ಡಿಜಿಟಲ್ ಬಳಕೆಗೆ ಸಂಬಂಧಿಸಿದಂತೆ ಸರ್ಕಾರ ಕರಡು ನೀತಿಯನ್ನು ಸಿದ್ಧಪಡಿಸಿ ಬಿಡುಗಡೆ ಮಾಡಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಕರಡು ನೀತಿ ಕುರಿತು ಸಾರ್ವಜನಿಕ ವಲಯದಲ್ಲೂ ವ್ಯಾಪಕ ಚರ್ಚೆ ನಡೆಯಬೇಕು ಎಂದು ಅಭಿಪ್ರಾಯಪಟ್ಟರು. ಇದೇ ಹಿನ್ನೆಲೆಯಲ್ಲಿ ಅಕ್ಟೋಬರ್ 16ರಂದು ವಿವಿಧ ವಲಯಗಳ ಪ್ರತಿನಿಧಿಗಳೊಂದಿಗೆ ಮಹತ್ವದ ಸಭೆ ನಡೆಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳು, ನಿಮ್ಹಾನ್ಸ್‌ನ ಮನೋತಜ್ಞರು, ಖಾಸಗಿ ವಿಶ್ವವಿದ್ಯಾಲಯಗಳು, ಕಾಲೇಜುಗಳ ಪ್ರತಿನಿಧಿಗಳು, ಅಪರಾಧ ತನಿಖಾ ಇಲಾಖೆ ಹಾಗೂ ಎನ್‌ಜಿಒಗಳ ಪ್ರತಿನಿಧಿಗಳು ಭಾಗವಹಿಸಿ, ಡಿಜಿಟಲ್ ಅಡಿಕ್ಷನ್‌ನ ದುಷ್ಪರಿಣಾಮಗಳು ಹಾಗೂ ಶಾಲಾ ಮಕ್ಕಳಲ್ಲಿ ಅದರ ಹೆಚ್ಚುತ್ತಿರುವ ಪ್ರವೃತ್ತಿ ಕುರಿತು ಚರ್ಚಿಸಿದ್ದಾರೆ.

ಡಿಜಿಟಲ್ ಅಡಿಕ್ಷನ್‌ನ ಪರಿಣಾಮವಾಗಿ ಸೈಬರ್ ಬುಲ್ಲಿಂಗ್, ನಿದ್ರಾಹೀನತೆ, ಮಾನಸಿಕ ಒತ್ತಡ ಹಾಗೂ ಶಿಕ್ಷಣದ ಸಾಮರ್ಥ್ಯ ಕುಸಿತದಂತಹ ಸಮಸ್ಯೆಗಳು ಕಂಡು ಬರುತ್ತಿವೆ ಎಂದು ಅವರು ತಿಳಿಸಿದ್ದಾರೆ. ಜೊತೆಗೆ, ಸಾಮಾಜಿಕ ಐಸೋಲೇಷನ್ ಹೆಚ್ಚುತ್ತಿದ್ದು, ವ್ಯಕ್ತಿಗಳ ನಡುವೆ ಸಂವಹನ ಮತ್ತು ಸಂಬಂಧಗಳ ಬೆಳವಣಿಕೆ ಕುಂಠಿತವಾಗುತ್ತಿದೆ ಎಂದು ಹೇಳಿದ್ದಾರೆ.

ಡಿಜಿಟಲ್ ಕ್ರಾಂತಿಯಿಂದ ಸಮಾಜದಲ್ಲಿ ಮಹತ್ತರ ಬದಲಾವಣೆ ಉಂಟಾಗಿದ್ದು, ಅದರ ದುಷ್ಪರಿಣಾಮಗಳ ಕುರಿತು ಸಮಗ್ರ ಅಧ್ಯಯನ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿಗಳು ಕೆಲವು ವಿಷಯಗಳಲ್ಲಿ ನಿಷೇಧದ ಕುರಿತು ಅಭಿಪ್ರಾಯ ವ್ಯಕ್ತಪಡಿಸಿರುವುದಾಗಿ ತಿಳಿಸಿದ ಅವರು, ಅದು ಕಾನೂನು ಪ್ರಕಾರವೇ ಜಾರಿಯಾಗಲಿದೆ ಎಂದರು. ಆದರೆ, ಸಾಮಾಜಿಕ ಮಾಧ್ಯಮವನ್ನು ಯಾವ ರೀತಿಯಲ್ಲಿ ಬಳಸಬೇಕು ಎಂಬುದರ ಕುರಿತು ಶಾಲಾ ಮಟ್ಟದಲ್ಲೇ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲಾಗುವುದು. ಪೋಷಕರಿಗೂ ಮಕ್ಕಳಲ್ಲಿ ಮೊಬೈಲ್ ಅಡಿಕ್ಷನ್ ಗುರುತಿಸುವುದು ಹಾಗೂ ಅದರಿಂದ ಹೊರತೆಗೆದಿಕೊಳ್ಳುವ ವಿಧಾನಗಳ ಕುರಿತು ಮಾಹಿತಿ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಈ ಕರಡು ನೀತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಸಾರ್ವಜನಿಕರು ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಬಹುದು. ಡಿಜಿಟಲ್ ಅಡಿಕ್ಷನ್ ನಿಯಂತ್ರಣ ಎಲ್ಲರ ಜವಾಬ್ದಾರಿಯಾಗಿದೆ ಎಂದು ಸಚಿವರು ಹೇಳಿದ್ದಾರೆ.

# ಈರಣ್ಣ ನಾಯಕ ನಿವೃತ್ತಿ: 31 ವರ್ಷಗಳ ಶಿಕ್ಷಣ ಸೇವೆಗೆ ವಿದಾಯ



**ಮಾನ್ವಿ :** ಬೆಂಗಳೂರು ಗ್ರಾಮಾಂತರ, ರಬ್ಬಣಕಲ್, ಕಾತರಿಗೆ ಹಾಗೂ ಆದಾಪುರ ಪೇಟೆ ಶಾಲೆಗಳಲ್ಲಿ 31 ವರ್ಷ 7 ತಿಂಗಳುಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಈರಣ್ಣ ನಾಯಕ ಅವರು ವಯೋ ನಿವೃತ್ತಿ ಹೊಂದಿದ್ದಾರೆ ಎಂದು ಮುಖ್ಯಗುರು ಹೆಚ್.ಡಿ ಪ್ರಕಾಶಬಾಬು ತಿಳಿಸಿದರು. ಈರಣ್ಣ ಅವರು ತಮ್ಮ ಸೇವಾ ಅವಧಿಯಲ್ಲಿ ವಿದ್ಯಾರ್ಥಿಗಳಲ್ಲಿ ಶಿಸ್ತು ಮತ್ತು ಶಿಕ್ಷಣದ ಮೌಲ್ಯಗಳನ್ನು ಬೆಳೆಸಲು ಶ್ರಮಿಸಿದ್ದಾರೆ ಎಂದು ಹೇಳಿದರು.

ಈರಣ್ಣ ಅವರ ಸಂಘಟನೆ ಮತ್ತು ಕಾರ್ಯಪಟುತೆಯ ಬಗ್ಗೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕ ಅಧ್ಯಕ್ಷ ಸಂಗಮೇಶ್ ಮುಧೋಳ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಅವರ ಕೊಡುಗೆ ಅನನ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಿಆರ್‌ಪಿ ಶ್ರೀಧರ್ ರಾವ್ ದೇಸಾಯಿ ಅವರು ಈರಣ್ಣ ಶಿಕ್ಷಕರ ವೃತ್ತಿ ಜೀವನದ ಸಾಧನೆಗಳನ್ನು ಸ್ಮರಿಸಿ, ಅವರ ಸೇವೆ ಹೊಸ ತಲೆಮಾರಿಗೆ ಪ್ರೇರಣೆಯಾಗಿದೆ ಎಂದರು.

ಈರಣ್ಣ ನಾಯಕ ಅವರು ಮಾತನಾಡುತ್ತಾ ತಮ್ಮ ವೃತ್ತಿ ಜೀವನದ ಅನುಭವಗಳನ್ನು ಹಂಚಿಕೊಂಡು, ಮಕ್ಕಳಲ್ಲಿ ಶಿಕ್ಷಣದ ಮಹತ್ವವನ್ನು ತಿಳಿಸಿದರು. ಈ ಸಂದರ್ಭದಲ್ಲಿ ಲಲಿತಾ ಈರಣ್ಣ ನಾಯಕ, ಪುರಸಭೆ ಸದಸ್ಯ ಭಾಷಾ ಸಾಬ್, ಎಸ್‌ಡಿಎಂಸಿ ಅಧ್ಯಕ್ಷ ಸಜ್ಜಲಿ ನಾಯಕ, ಸರ್ಕಾರಿ ನೌಕರರ ಸಂಘದ ನಿರ್ದೇಶಕ ವಿಜಯಕುಮಾರ್ ಸಿ.ಡಿ, ಪ್ರಭಾರಿ ಮುಖ್ಯಗುರು ಬಸಪ್ಪ, ಲಕ್ಷ್ಮೀದೇವಿ, ಕೆ. ನಾಗರಾಜ, ಲಕ್ಷ್ಮಿ ಕೆ, ಉಮಾದೇವಿ ಸೇರಿದಂತೆ ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಚಿತ್ರಕಲೆ ಭಾವನೆ, ಅನುಭವಗಳ ಅಭಿವ್ಯಕ್ತಿಯ ಮಾಧ್ಯಮ:ಪ್ರೊ.ಬಿರಾದಾರ

**ಕಲಬುರಗಿ,ಏ.1**–ಚಿತ್ರಕಲೆ ಭಾವನೆಗಳು ಮತ್ತು ಅನುಭವಗಳ ಅಭಿವ್ಯಕ್ತಿಯ ಮಾಧ್ಯಮವಾಗಿದ್ದು, ಅದು ಒಂದು ಜಾಗತಿಕ ಭಾಷೆಯಾಗಿದೆ ಎಂದು ಕಲಬುರ್ಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಆರ್.ಆರ್. ಬಿರಾದಾರ್ ಹೇಳಿದರು.

ಸಿಯುಕೆಯ ಸಂಗೀತ ಮತ್ತು ಲಲಿತಕಲೆಗಳ ವಿಭಾಗದಲ್ಲಿ ಏರ್ಪಡಿಸಲಾಗಿರುವ ದೃಶ್ಯಕಲಾ ಪ್ರದರ್ಶನವನ್ನು ಉದ್ಘಾಟಿಸಿ, ಕಲಾಕೃತಿಗಳನ್ನು ವೀಕ್ಷಿಸಿದ ಅವರು 'ಯಾವುದೇ ಬಗೆಯ ಕಲೆಗಳು ಮನುಷ್ಯನಿಗೆ ಆನಂದವನ್ನು ಮತ್ತು ಸಂಸ್ಕಾರವನ್ನು ನೀಡುತ್ತವೆ, ಮನಸ್ಸಿನ ಒತ್ತಡವನ್ನು ಕಡಿಮೆ ಮಾಡುತ್ತವೆ, ಆರೋಗ್ಯವನ್ನು ವೃದ್ಧಿಸುತ್ತವೆ ಮತ್ತು ಜನರನ್ನೂ ಒಂದುಗೂಡಿಸುತ್ತವೆ, ಹಾಗಾಗಿ ಪ್ರತಿಯೊಬ್ಬರೂ ಕಲೆಗಳಲ್ಲಿ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ರಚಿಸಿದ ಇಲ್ಲಿನ ಎಲ್ಲ ಕಲಾಕೃತಿಗಳಲ್ಲಿ ಸಾಮಾಜಿಕ ಸಂವೇದನೆ, ಪರಿಸರದ ಕಾಳಜಿ ಮೊದಲಾದ ಸಂಗತಿಗಳು ಅಭಿವ್ಯಕ್ತಗೊಂಡಿದ್ದು, ನೋಡುಗರಲ್ಲಿ ಪ್ರಕೃತಿ, ಪ್ರಾಣಿ –ಪಕ್ಷಿಗಳ ಬಗ್ಗೆ ಪ್ರೀತಿ, ಅಭಿಮಾನ ಮೂಡಿಸುತ್ತವೆ ಎಂದರಲ್ಲದೆ ದೇಶ, ಭಾಷೆ, ಸಂಸ್ಕೃತಿಗಳ ಬಗ್ಗೆಯೂ ಅರಿವು, ಅಭಿಮಾನಿ ಮೂಡಿಸುವಂತಹ ಕಲಾಕೃತಿಗಳನ್ನೂ ರಸಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಗ್ರಂಥಾಲಯದ ಮುಖ್ಯಸ್ಥರಾದ ಡಾ. ಪರಶುರಾಮ ಕಟ್ಟಿಮನಿ ಅವರು 'ವಿದ್ಯಾರ್ಥಿಗಳ ಪ್ರತಿಭೆ ಅತ್ಯಂತ ಸೃಜನಶೀಲವಾದದ್ದು, ಅವರ ಕಲಾಕೃತಿಗಳಲ್ಲಿ ಸ್ಪಷ್ಟವಾಗಿ ಅಭಿವ್ಯಕ್ತಗೊಂಡಿದೆ ಎಂದು ವಿವರಿಸುತ್ತ ಭವಿಷ್ಯದಲ್ಲಿ ಉತ್ತಮ ಕಲಾವಿದರಾಗಿ ಬೆಳೆಯುವ ಎಲ್ಲ ಲಕ್ಷಣಗಳು ಇವರ ಕಲಾಕೃತಿಗಳಲ್ಲಿ ಬಿಂಬಿತವಾಗಿವೆ, ಭವಿಷ್ಯದಲ್ಲಿ ಎಲ್ಲರೂ ದೇಶದ ಸಾಂಸ್ಕೃತಿಕ ಆಸ್ತಿಯಾಗುವುದರಲ್ಲಿ

ಸಂದೇಹವಿಲ್ಲ ಎಂದರು.

ವಿಭಾಗದ ಮುಖ್ಯಸ್ಥರು ಹಾಗೂ ಮಾನವಿಕ ಮತ್ತು ಭಾಷಾ ನಿಕಾಯದ ಡೀನರಾದ ಪ್ರೊ. ವಿಕ್ರಮ ವಿಸಾಜಿ ಅವರು ಮಾತನಾಡಿ, ಒಬ್ಬೊಬ್ಬರಲ್ಲಿ ಒಂದೊಂದು ಸಾಮರ್ಥ್ಯ ಅಡಗಿರುತ್ತದೆ ಅದು ಬಣ್ಣ, ನಾದ, ಕಲ್ಲು, ಕೊರಡು ಅಥವಾ ಶಬ್ಧಗಳ ಮೂಲಕ ಕಲಾಕೃತಿಗಳಾಗಿ ಹೊರಹೊಮ್ಮಿ, ಕಲಾವಿದರು ಮತ್ತು ನೋಡುಗರ ಹೃದಯಗಳೆರಡನ್ನೂ ಸಂಸ್ಕಾರಗೊಳಿಸುತ್ತವೆ. ದೇಶದ ಬೇರೆ ಬೇರೆ



ಪ್ರದೇಶಗಳಿಂದ ಬಂದಿರುವ ಈ ಎಲ್ಲ ವಿದ್ಯಾರ್ಥಿಗಳು ಅತ್ಯಂತ ಪ್ರತಿಭಾಶಾಲಿಗಳಾಗಿದ್ದಾರೆ, ಇತ್ತೀಚಿಗೆ ಎಲ್ಲರೂ ಸೇರಿ ಕಲಬುರಗಿಯಲ್ಲಿ ಏರ್ಪಡಿಸಿದ್ದ ಕಲಾ ಪ್ರದರ್ಶನ ಅವಿಸ್ಮರಣೀಯವಾದುದು, ಮೊನ್ನೆ ಕೊಚ್ಚಿ ಬೈನಾಲೆ ಅಂತಾರಾಷ್ಟ್ರೀಯ ಕಲಪ್ರದರ್ಶನವನ್ನೂ ನೋಡಿ ಬಂದಿದ್ದಾರೆ ಎಂದು ಬಣ್ಣಿಸಿದರು.

ವಿಭಾಗದ ಅಧ್ಯಾಪಕರು ಮತ್ತು ಕಲಾ ಪ್ರದರ್ಶನದ ಸಂಯೋಜಕರು ಆಗಿರುವ ಡಾ. ಶಿವಾನಂದ ಬಂಟನೂರ ಮಾತನಾಡಿ 'ನಮ್ಮ ವಿದ್ಯಾರ್ಥಿಗಳಲ್ಲಿರುವ ವಿಶೇಷ ಆಸಕ್ತಿಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಅವರ ಆಸಕ್ತಿಗಳಿಗೆ ಅನುಗುಣವಾಗಿ ತರಬೇತಿ ನೀಡಲಾಗುತ್ತಿದ್ದು, ಒಟ್ಟು ಏಳು ಜನ ವರ್ಣಚಿತ್ರಕಲೆಯಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿದ್ದಾರೆ ಮತ್ತು ನಾಲ್ಕು ಜನ ವಿದ್ವಾಂಸರು ಪಿ ಎಚ್ ಡಿ ಅಧ್ಯಯನ ಮಾಡುತ್ತಿದ್ದಾರೆ, ವಿದ್ಯಾರ್ಥಿಗಳ ಕ್ರಿಯಾಶೀಲತೆ ಮತ್ತು ಸಾಧನೆ ಬಗ್ಗೆ ನನಗೆ ಹೆಮ್ಮೆ ಎನಿಸುತ್ತದೆ ಎಂದು ವಿವರಿಸಿದರು.

ಸಮಾರಂಭದಲ್ಲಿ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಆರಂಭದಲ್ಲಿ ಶಿವಾನಿ ರಾವತ್ ಹಾಗೂ ಶ್ವೇತಾ ದೂದಿ ಸ್ವಾಗತ ಗೀತೆ ಹಾಡಿದರು, ವಿಭಾಗದ ಅಧ್ಯಾಪಕ ವಿನಯಕುಮಾರ್ ಆರ್. ಕಾರ್ಯಕ್ರಮ ನಿರೂಪಿಸಿದರು, ಸಂಶೋಧನಾ ವಿದ್ಯಾರ್ಥಿ ಪ್ರಶಾಂತ ಕುವರ್ ವಂದಿಸಿದರು.

ಕಲಾ ಪ್ರದರ್ಶನದಲ್ಲಿ ವಿಭಾಗದ ಸಂಶೋಧನಾ ವಿದ್ವಾಂಸರಾದ ನಯನಬಾಬುರಾವ್, ಪ್ರಶಾಂತ್ ಕುಮಾರ್, ರಮೇಶ್ ಮೋತುಕುರಿ, ಅಶ್ವಿನಿ ರಾಜಶೇಖರ ಕಲ್ಯಾಣಿ, ಹಾಗೂ ಸ್ನಾತಕೋತ್ತರ ಪೇಂಟಿಂಗ್ ವಿದ್ಯಾರ್ಥಿಗಳಾದ ಶಿವಾನಿ ರಾವತ್, ಸಿತಾಂಶು ಮುಖರ್ಜಿ, ಲೆಂಕೆ ಗೀತಾ, ದಕ್ಷಿತಾ ಲಾಂಜೆವರ್, ಶ್ವೇತಾ ಶಿವಾನಿ, ಬಿ ಜಿ ಲಿಂಗಡೋ ಮೌಪಲಾಂಗ್, ಕುಮಾರ್ ಮುರುಳಿ ಅವರು ತಮ್ಮ ವರ್ಣ ಚಿತ್ರ ಮತ್ತು ಶಿಲ್ಪಕಲಾ ಕೃತಿಗಳನ್ನು ಪ್ರದರ್ಶನಕ್ಕೆ ಇಟ್ಟಿರುವರು. ಕಲಾ ಪ್ರದರ್ಶನವು 2ನೇ ಏಪ್ರಿಲ್ ಸಂಜೆ 5.30 ವರೆಗೆ ಇರುತ್ತದೆ.

# ಸಚಿವರ ಆಪ್ತ ಸಹಾಯಕರು ಕಾಮಗಾರಿ ನಿಲ್ಲಿಸಿಲ್ಲ; ಗುತ್ತೇದಾರ



**ಚಿತ್ತಾಪುರ;ಏ.1:** ಸ್ಥಳೀಯ ಕಾಂಗ್ರೆಸ್ ಮುಖಂಡರ ಮಾತು ಕೇಳಿ ಸಚಿವರ ಆಪ್ತ ಸಹಾಯಕರು ಕಾಮಗಾರಿ ನಿಲ್ಲಿಸಿಲ್ಲ, ಇದು ಸತ್ಯಕ್ಕೆ ದೂರ ಎಂದು ದಿಗ್ಗಾಂವ ಗ್ರಾಮದ ಕಾಂಗ್ರೆಸ್ ಮುಖಂಡರಾದ ಶ್ರೀಮಂತ ಗುತ್ತೇದಾರ, ಮಲ್ಲಿನಾಥ ಪಾಟೀಲ್, ಸುಭಾಶ್ಚಂದ್ರ ಪವಾರ್ ಹೇಳಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದಿಗ್ಗಾಂವ ಗ್ರಾಮದಲ್ಲಿ ಅಲ್ಟ್ರಾಟೇಕ್ ಸಿಮೆಂಟ್ ಕಂಪೆನಿಯ ವತಿಯಿಂದ ಸಿಎಸ್'ಆರ್ ಅನಿದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಗುಣಮಟ್ಟದಿಂದ ಮಾಡದೇ ಸಂಪೂರ್ಣ ಕಳಪೆ ಮಟ್ಟದಲ್ಲಿ ನಡಿತಾ ಇದೆ. ಅದಕ್ಕೆ ಗುಣಮಟ್ಟದಿಂದ ಮಾಡಬೇಕೆನ್ನುವುದು ಗ್ರಾಮಸ್ಥರ ಆಗ್ರಹವಾಗಿದೆ. ಇದರಲ್ಲಿ ಕಾಂಗ್ರೆಸ್ ಮುಖಂಡರ ಹಾಗೂ ಸಚಿವರ ಆಪ್ತ ಸಹಾಯಕರಿಗೂ ಯಾವುದೇ ರೀತಿಯ ಸಂಬಂಧ ಇಲ್ಲ ಎಂದರು.

ಅಲ್ಟ್ರಾಟೆಕ್ ಸಿಮೆಂಟ್ ಕಂಪೆನಿಯವರು ದಿಗ್ಗಾಂವ ಗ್ರಾಮಕ್ಕೆ ಸಿಎಸ್'ಆರ್ ಅನುದಾನದಲ್ಲಿ ಗ್ರಾಮದ ಸರ್ವಾಗೀಂಣ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದು ಭರವಸೆ ನೀಡಿದರು, ಅದರಂತೆ ಗ್ರಾಮದಲ್ಲಿ ಅಭಿವೃದ್ಧಿ ಕಾಮಗಾರಿಗಳು ಕೈಗೊಂಡಿದ್ದಾರೆ. ಆದರೆ ಕಾಮಗಾರಿ ತಮ್ಮ ಮನಸ್ಸಿಗೆ ಬಂದ ಹಾಗೆ ಮಾಡಿದರೇ ಹೇಗೆ, ಗ್ರಾಮಸ್ಥರಾದ ನಾವು ಕಳಪೆ ಕಾಮಗಾರಿ ಮಾಡುವ ಬದಲು ಗುಣಮಟ್ಟದಿಂದ ಮಾಡಬೇಕು. ನಿವು ಮಾಡುತ್ತಿರುವ ಕಾಮಗಾರಿಯಿಂದ ಗ್ರಾಮದ ಅಭಿವೃದ್ಧಿಗೆ ಪೂರಕವಾಗಲಿದೆ. ಒಂದು ವೆಳೆ ನೀವು ಕಳಪೆ ಗುಣಮಟ್ಟದಿಂದ ಕಾಮಗಾರಿ ಮಾಡಿದರೇ ಮುಂದಿನ ದಿನಗಳಲ್ಲಿ ಅದು ಬಳಕೆಗೆ ಬರದೇ ಹೋದರೇ ಹೇಗೆ ಎಂದು ಪ್ರಶ್ನಿಸಿದರು.

ಕಂಪೆನಿಯ ಅಧಿಕಾರಿ ಸೋಮಶೇಖರ ಅವರಿಗೆ ಕಾಮಗಾರಿಗಳು ಗುಣಮಟ್ಟದಿಂದ ನಡೆಯುತ್ತಿಲ್ಲ ಕಳಪೆ ಕಾಮಗಾರಿ ಮಾಡಲಾಗುತ್ತಿದೆ ಎಂದು ಗಮನಕ್ಕೆ ತಂದರೂ ಅವರು ನೀವು ಯಾರು ನಮಗೆ ಕೇಳುವವರು ಎಂದು ಹೇಳುತ್ತಾರೆ. ಗ್ರಾಮಸ್ಥರಿಗೆ ಬೇಕಾಗಿರುವುದು ಗುಣಮಟ್ಟದ ಕಾಮಗಾರಿ ಅದು ಬಿಟ್ಟು ಕಳಪೆ ಕಾಮಗಾರಿ ಮಾಡುವುದಾರೇ ಅದು ಯಾವ ಪ್ರಯೋಜನವೇ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರು ತಾಲೂಕಿನ ಸರ್ವಾಂಗಿಣ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಅದರಂತೆ ಅವರು ಗುಣಮಟ್ಟದ ಕಾಮಗಾರಿಗೆ ಹೆಚ್ಚಿನ ಒತ್ತು ನೀಡುತ್ತಾರೆ. ಅದರಂತೆ ಗ್ರಾಮಸ್ಥರಾದ ನಾವು ಕೂಡ ಗುಣಮಟ್ಟದ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡುತ್ತೇವೆ ಎಂದರು.

ಅಲ್ಟ್ರಾಟೆಕ್ ಸಿಮೆಂಟ್ ಕಂಪೆನಿಯವರು ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶೌಚಾಲಯ, ಸಣ್ಣ ಹಳ್ಳದ ಬ್ರೀಡ್ಜ್ ಹತ್ತಿರ ಮಹಿಳಾ ಶೌಚಾಲಯ, ಬಾವಿ ಹೂಳೆತ್ತುವ ಕಾಮಗಾರಿ, ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸುತ್ತಿದ್ದಾರೆ. ಆದರೆ ಅವಗಳೆಲ್ಲ ಕಳಪೆ ಗುಣಮಟ್ಟದಿಂದ ನಡೆಯುತ್ತಿದ್ದು, ಗುಣಮಟ್ಟದಿಂದ ನಡೆಯಬೇಕೆನ್ನುವುದು ನಮ್ಮ ಆಗ್ರಹವಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಜಗನ್ನಾಥ ಸೀದಾ, ಜಗನ್ನಾಥ ಇಟಗಾ, ಮಲ್ಲಿನಾಥ ಕುಕನೂರ ಸೇರಿದಂತೆ ಇತರರು ಇದ್ದರು.

# ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ ಅತಿವಾಳದಲ್ಲಿ ಜಮೀನು ಕಾಯ್ದಿರಿಸಿದ ತಾಲ್ಲೂಕು ಆಡಳಿತ

**ಬೀದರ್:** ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಮತ್ತು ಸಾಂಸ್ಕೃತಿಕ ಭವನಕ್ಕಾಗಿ ತಾಲ್ಲೂಕು ಆಡಳಿತವು ತಾಲ್ಲೂಕಿನ ಅತಿವಾಳದಲ್ಲಿ ಜಮೀನು ಕಾಯ್ದಿರಿಸಿದೆ.

ಒಟ್ಟು 9 ಎಕರೆ 36 ಗುಂಟೆ ಜಮೀನು ಕಾಯ್ದಿರಿಸಿ ಆದೇಶ ಹೊರಡಿಸಲಾಗಿದೆ ಎಂದು ಬೀದರ್ ತಹಶೀಲ್ದಾರ್ ರವೀಂದ್ರ ದಾಮಾ ತಿಳಿಸಿದ್ದಾರೆ. ಅತಿವಾಳದಲ್ಲಿ ಜಿಲ್ಲಾಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ, ಸಾಂಸ್ಕೃತಿಕ ಭವನ, ಬುದ್ಧ ವಿಹಾರ ಹಾಗೂ ಉದ್ಯಾನಕ್ಕೆ 10 ಎಕರೆ ಜಮೀನು ಮಂಜೂರು ಮಾಡುವಂತೆ ದಿ ಬುದ್ಧ



ಯುತ್ ಕ್ಲಬ್ ವತಿಯಿಂದ ತಹಶೀಲ್ದಾರರಿಗೆ ಮನವಿ ಪತ್ರ ಸಲ್ಲಿಸಲಾಗಿತ್ತು. ಇದೀಗ ಅವರು ಗ್ರಾಮದ ಸರ್ವೆ ಸಂಖ್ಯೆ 1 ರಲ್ಲಿ 9 ಎಕರೆ 36 ಗುಂಟೆ ಜಮೀನು ಕಾಯ್ದಿರಿಸಿ ಆದೇಶ ಹೊರಡಿಸಿದ್ದಾರೆ ಎಂದು ದಿ ಬುದ್ಧ ಯುತ್ ಕ್ಲಬ್ ಅಧ್ಯಕ್ಷ ಮಹೇಶ ಎಸ್. ರಾಂಪುರೆ ತಿಳಿಸಿದ್ದಾರೆ.

ಸರ್ಕಾರ ಆದಷ್ಟು ಬೇಗ ಅಧ್ಯಯನ ಹಾಗೂ ಸಾಂಸ್ಕೃತಿಕ ಕೇಂದ್ರ ನಿರ್ಮಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಗ್ರಾಮೀಣ ನೈರ್ಮಲ್ಯ ಜಾಗೃತಿಗೆ ಎನ್‌ಎಸ್‌ಎಸ್ ಶಿಬಿರಗಳ ಮಹತ್ವ: ಪ್ರೊ. ಬಿ.ಎಸ್. ಬಿರಾದರ್



**ಬೀದರ್ :ಏ.1:**ತಾಲೂಕಿನ ಬಕ್ಕಚೌಡಿ ಗ್ರಾಮದಲ್ಲಿ ಬೀದರ್ ವಿಶ್ವವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಶಿಬಿರದ ಸಮಾರೋಪ ಸಮಾರಂಭ ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಬೀದರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ.ಎಸ್. ಬಿರಾದರ್ ಅವರು ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕುರಿತು ಜಾಗೃತಿ ಮೂಡಿಸುವಲ್ಲಿ ಇಂತಹ ಶಿಬಿರಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಹಾತ್ಮ ಗಾಂಧೀಜಿಯವರ ಸ್ವಚ್ಛತಾ ಕನಸನ್ನು ಸಾಕಾರಗೊಳಿಸಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದು ಕರೆ ನೀಡಿದರು.

ಬಕ್ಕಚೌಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಸುಮತಿ ಎಸ್. ರುದ್ರ ಅವರು, ರಾಷ್ಟ್ರೀಯ ಸೇವಾ ಯೋಜನೆ ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ ಎಂದು ಅಭಿಪ್ರಾಯಪಟ್ಟರು. 'ಮೈ ಭಾರತ' ಯುವ ಅಧಿಕಾರಿ ಮಯೂರಕುಮಾರ್ ಗೋರ್ಮೆ ಅವರು, ಯುವ ಸಮುದಾಯಕ್ಕೆ ಲಭ್ಯವಿರುವ ಅವಕಾಶಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ರವೀಂದ್ರನಾಥ್ ಗಬಾಡಿ ಅವರು, ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಕೇವಲ ಶಿಬಿರದ ಅವಧಿಗೆ ಮಾತ್ರ ಸೇವೆಯನ್ನು ಸೀಮಿತಗೊಳಿಸದೆ ಜೀವನಪರ್ಯಂತ ಸೇವಾಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಹಾಗೂ ಶಿಬಿರ ನಿರ್ದೇಶಕರಾದ ಡಾ. ಅಂಬರೀಶ್ ವೀರನಾಯಕ ಅವರು ಶಿಬಿರದ ವರದಿ ವಾಚಿಸಿದರು. ಶಿಬಿರದ ಅವಧಿಯಲ್ಲಿ ವಿದ್ಯಾರ್ಥಿಗಳು ಬೀದಿ ನಾಟಕಗಳ ಮೂಲಕ ಸಾಮಾಜಿಕ ಜಾಗೃತಿ ಮೂಡಿಸಿ ಗಮನ ಸೆಳೆದರು.ಈ ವೇಳೆ ಆಶಾ ಕಾರ್ಯಕರ್ತರು ಹಾಗೂ ಮಹಿಳೆಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮದ ಪ್ರಮುಖರಾದ ಮಹೇಶ್ ಪಾಟೀಲ್, ಸಂಗಪ್ಪ ಮಾಲೀಪಾಟೀಲ್, ವಿಜಯ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಆಕಾಶ್ ಮತ್ತು ವಾಣಿಶ್ರೀ ನಿರೂಪಿಸಿದರು. ವಿದ್ಯಾಭೂಷಣ ಆರ್ಯ ಸ್ವಾಗತಿಸಿದರು. ಡಾ. ಶಾಂತಕುಮಾರ್ ಚಿದ್ರಿ ವಂದಿಸಿದರು. ಉಪನ್ಯಾಸಕರಾದ ಸಂತೋಷಿ ಮಡ್ಡೆ, ಅರುಣ್ ಬೇಂದ್ರೆ, ಆನಂದ್ ಚಾಕುರೆ, ಲಕ್ಷ್ಮಣ, ಶಿವರಾಜ್ ಪಾಟೀಲ್ ಸೇರಿದಂತೆ ಅನೇಕರು ಮತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಪುಣ್ಯಪುರುಷನ 119ನೇ ಜಯಂತಿ: ಭಕ್ತರ ಗುರುವಂದನೆ



**ತುಮಕೂರು, ಏ. 1–** ಲಕ್ಷಾಂತರ ಬಡ ಮಕ್ಕಳಿಗೆ ಅನ್ನ, ಆಶ್ರಯ ನೀಡಿ ಅವರ ಬದುಕಿಗೆ ಬೆಳಕಾಗಿದ್ದ ಕಾಯಕ ಯೋಗಿ, ತ್ರಿವಿಧ ದಾಸೋಹಿ, ನಡೆದಾಡುವ ದೇವರೆಂದೇ ನಾಡಿನ ಉದ್ದಗಲಕ್ಕೂ ಪ್ರಖ್ಯಾತರಾಗಿದ್ದ ಸಿದ್ದಗಂಗಾ ಮಠದ ಶಿವೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಶ್ರೀಮಠದಲ್ಲಿಂದು ಸಡಗರ ಸಂಭ್ರಮದಿಂದ ಆಚರಿಸಲಾಯಿತು. 12ನೇ ಶತಮಾನದ ಬಸವಣ್ಣನವರ ತತ್ವಾದರ್ಶಗಳನ್ನು ಚಾಚೂ ತಪ್ಪದೇ ಪಾಲನೆ ಮಾಡುತ್ತಾ ಸಮಾಜದ ಉದ್ಧಾರಕ್ಕೆ ಸದಾ ತುಡಿಯುತ್ತಿದ್ದ ಆಧುನಿಕ ಬಸವಣ್ಣ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಗೆ ವಿವಿಧ ಮಠಾಧೀಶರು, ಹರಗುರುಚರಮೂರ್ತಿಗಳು, ಗಣ್ಯಾತಿ ಗಣ್ಯರು ಹಾಗೂ ಸಹಸ್ರಾರು ಭಕ್ತಗಣ ಸಾಕ್ಷಿಯಾದರು.ರಾಷ್ಟ್ರಪತಿ ದ್ರೌಪದಿ ಮುರ್ಮು, ರಾಜ್ಯಪಾಲ ಥಾವರ್ ಚಂದ್ ಗೆಹಲೋಟ್, ಸುತ್ತೂರು ವೀರಸಿಂಹಾಸನ ಸಂಸ್ಥಾನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ವಿ. ಸೋಮಣ್ಣ, ಗೃಹ ಸಚಿವ ಡಾ. ಜಿ. ಪರಮೇಶ್ವರ್, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್, ರಾಜ್ಯ ಸರ್ಕಾರದ ನವದೆಹಲಿ ಪ್ರತಿನಿಧಿ ಟಿ.ಬಿ. ಜಯಚಂದ್ರ, ಮಾಜಿ ಸಚಿವ ಹಾಗೂ ಶಾಸಕ ಕೆ.ಎನ್. ರಾಜಣ್ಣ, ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್‌ಗೌಡ ಅವರು ಶ್ರೀಗಳ ಗದ್ದುಗೆ ದರ್ಶನ ಪಡೆದು ಭಕ್ತಿ ಸಮರ್ಪಿಸಿದರು.

**ಗದ್ದುಗೆಯಲ್ಲಿ ಮೊಳಗಿದ ಮಂತ್ರ ಘೋಷಗಳು**–ನಾಡಿನ ಭಕ್ತಾದಿಗಳ ಮನ ಮನೆಗಳ ದೈವೀ ಪ್ರಭೆಯಾಗಿದ್ದ ಲಿಂ. ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರು ಐಕ್ಯರಾಗಿರುವ ಶಿವಯೋಗಿ ಮಂದಿರವನ್ನು ಬಗೆ ಬಗೆಯ ಪುಷ್ಪಗಳಿಂದ ಸಿಂಗಾರಗೊಳಿಸಲಾಗಿತ್ತು. ಶ್ರೀಗಳ ಗದ್ದುಗೆಯನ್ನು ಸಹ ಬಗೆ ಬಗೆಯ ಹೂವು, ಹಣ್ಣುಗಳಿಂದ ಅಲಂಕರಿಸಿದ್ದು, ಮುಂಜಾನೆಯಿಂದಲೇ ಧಾರ್ಮಿಕ ವಿಧಿ ವಿಧಾನಗಳು, ಅಭಿಷೇಕ, ಅಷ್ಟೋತ್ತರ, ಮಹಾಮಂಗಳಾರತಿ, ಭಜನಾ ಮಂತ್ರ ಘೋಷಗಳು ಮೊಳಗಿದವು.ಶ್ರೀಗಳ ಗದ್ದುಗೆಗೆ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ನೇತೃತ್ವದಲ್ಲಿ ಹರಗುರುಚರಮೂರ್ತಿಗಳ ಸಮ್ಮುಖದಲ್ಲಿ ರುದ್ರಾಭಿಷೇಕ, 108 ಅಷ್ಟೋತ್ತರ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯ, ಮಹಾಮಂಗಳಾರತಿ ನೆರವೇರಿಸಲಾಯಿತು. ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರು ಎಂದಿನಂತೆ ನಸುಕಿನಲ್ಲೇ ಇಷ್ಟಲಿಂಗ ಪೂಜೆ ನೆರವೇರಿಸಿ ಪರಮ ಪೂಜ್ಯರ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸುವ ಮೂಲಕ ಆಶೀರ್ವಾದ ಪಡೆದರು. ಮೈಸೂರಿನ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹಾಗೂ ಶ್ರೀಮಠದ ಉತ್ತರಾಧಿಕಾರಿ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿಯವರು ವಿವಿಧ ಬಗೆಯ ಹಣ್ಣುಗಳು, ಪುಷ್ಪಗಳಿಂದ ಅಲಂಕರಿಸಿದ್ದ ಗದ್ದುಗೆಗೆ ಪುಷ್ಪ ನಮನ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

**ಪುತ್ಥಳಿ ಮೆರವಣಿಗೆ**–ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿ ಪ್ರಯುಕ್ತ ಬೆಳಿಗ್ಗೆ 8 ಗಂಟೆಗೆ ಗದ್ದುಗೆ ಮಂದಿರದ ಮುಂಭಾಗದಿಂದ ಆರಂಭವಾದ ಶ್ರೀಗಳ ಕಂಚಿನ ಪುತ್ಥಳಿ ಹೊತ್ತ ರುದ್ರಾಕ್ಷಿ ಮಂಟಪದ ಮೆರವಣಿಗೆಗೆ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಚಾಲನೆ ನೀಡಿದರು. ಮೆರವಣಿಗೆಯುದ್ದಕ್ಕೂ ನಂದಿಧ್ವಜ ಕುಣಿತ, ಕರಡಿ ವಾದ್ಯ, ಡೋಲು ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳ ಪ್ರದರ್ಶನ ನೋಡುಗರ ಗಮನ ಸೆಳೆದವು.ಶ್ರೀಮಠದ ಆವರಣದಲ್ಲಿ ನಡೆದ ಮೆರವಣಿಗೆಯಲ್ಲಿ 119 ಪೂರ್ಣಕುಂಭ ಕಳಸ ಹೊತ್ತ ಸುಮಂಗಲಿಯರು, ಹರಗುರುಚರಮೂರ್ತಿಗಳು, ಕಿರಿಯ ಶ್ರೀ ಶಿವ ಸಿದ್ದೇಶ್ವರ ಸ್ವಾಮೀಜಿ, ಭಕ್ತಾದಿಗಳು, ಮಕ್ಕಳು ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು.

**ದಾಸೋಹ ಸವಿದ ಭಕ್ತರು**–ಶ್ರೀಕ್ಷೇತ್ರದಲ್ಲಿ ಎಂದಿನಂತೆ ಶ್ರೀಗಳ ಜಯಂತಿ ಹಾಗೂ ಗುರುವಂದನಾ ಮಹೋತ್ಸವಕ್ಕೆ 6 ಕಡೆ ವಿಶೇಷ ದಾಸೋಹದ ವ್ಯವಸ್ಥೆ ಮಾಡಲಾಗಿತ್ತು. ಶ್ರೀಕ್ಷೇತ್ರಕ್ಕೆ ಆಗಮಿಸಿದ ಸಹಸ್ರಾರು ಭಕ್ತ ಸಮೂಹಕ್ಕೆ ಬೆಳಗಿನ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿ ಊಟದ ವ್ಯವಸ್ಥೆಯನ್ನು ಮಾಡಲಾಗಿದೆ. ಶ್ರೀಕ್ಷೇತ್ರದ 6 ಕಡೆ ಮಹಾಪ್ರಸಾದದ ವಿನಿಯೋಗ ನಡೆಯುತ್ತಿದ್ದು, ಮಧ್ಯಾಹ್ನ ಊಟಕ್ಕೆ ಸಿಹಿ ಬೂಂದಿ, ಖಾರ ಬೂಂದಿ, ಚಿತ್ರಾನ್ನ, ಪಲ್ಯ, ಕೋಸಂಬರಿ, ಅನ್ನ ಸಾಂಬರು, ಪಾಯಸ, ಮಜ್ಜಿಗೆ ಸೇರಿದಂತೆ ವಿವಿಧ ಬಗೆಯ ಖಾದ್ಯಗಳನ್ನು ತಯಾರಿಸಲಾಗಿತ್ತು. ತುಮಕೂರಿನ ಸಿದ್ದಗಂಗಾ ಮಠದಲ್ಲಿಂದು ನಡೆದ ಲಿಂ. ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಶ್ರೀ ಸಿದ್ದಲಿಂಗ ಸ್ವಾಮೀಜಿ, ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ವಿ. ಸೋಮಣ್ಣ, ರಾಜ್ಯ ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ. ಪಾಟೀಲ್, ಲಕ್ಷ್ಮೀಹೆಬ್ಬಾಳ್ಕರ್, ಶಾಸಕರಾದ ಜ್ಯೋತಿಗಣೇಶ್, ಸುರೇಶ್‌ಗೌಡ ಭಾಗವಹಿಸಿದ್ದರು.ಇನ್ನು ರಾತ್ರಿ ಊಟಕ್ಕೂ ಸಹ ವಿವಿಧ ಬಗೆಯ ಖಾದ್ಯಗಳನ್ನು ತಯಾರಿಸಲಾಗಿದ್ದು, 1 ಲಕ್ಷಕ್ಕೂ ಅಧಿಕ ಮಂದಿ ಭಕ್ತಾದಿಗಳಿಗೆ ದಾಸೋಹದ ವ್ಯವಸ್ಥೆ ಮಾಡಲಾಗಿದ್ದು, ನಾಡಿನಾದ್ಯಂತ ಆಗಮಿಸಿದ್ದ ಭಕ್ತಾದಿಗಳು ಶ್ರೀಕ್ಷೇತ್ರದ ಪ್ರಸಾದವನ್ನು ಸೇವಿಸಿ ಪುನೀತರಾದರು.

**ಹರಿದು ಬಂದ ಭಕ್ತ ಸಾಗರ** –ಕಲ್ಪತರುನಾಡಿನ ಮುಕುಟಮಣಿ ಸಿದ್ದಗಂಗೆಯಲ್ಲಿ ಮನೆ ಮಾಡಿದ್ದ ಸಡಗರ ಸಂಭ್ರಮ ಹಸಿವು ತಣಿಸಿದ ದಾಸೋಹ.. ದಾಹ ನೀಗಿಸಿದ ನೀರು ಮಜ್ಜಿಗೆ ಮುಗಿಲು ಮುಟ್ಟಿದ ಭಕ್ತರ ಹರ್ಷೋದ್ಗಾರ ನಾಡಿನ ವಿವಿಧೆಡೆಯಿಂದ ಹರಿದು ಬಂದ ಭಕ್ತ ಸಾಗರ ತುಮಕೂರು ನಗರಕ್ಕೆ ಅಣತಿಯ ದೂರದಲ್ಲಿರುವ ಸಿದ್ದಗಂಗಾ ಕ್ಷೇತ್ರದಲ್ಲಿಂದು ನಡೆದ ಅಭಿನವ ಬಸವಣ್ಣ, ತ್ರಿವಿಧ ದಾಸೋಹಮೂರ್ತಿ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳವರ 119ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವದಲ್ಲಿ ಕಂಡು ಬಂದ ಹೈಲೆಟ್ಸ್ .ಶ್ರೀಕ್ಷೇತ್ರಕ್ಕೆ ಬಳ್ಳಾರಿ, ವಿಜಯಪುರ, ಬಾಗಲಕೋಟೆ, ದಾವಣಗೆರೆ ಸೇರಿದಂತೆ ರಾಜ್ಯದ ಮೂಲೆ ಮೂಲೆಗಳಿಂದ ಭಕ್ತ ಸಾಗರವೇ ಹರಿದು ಬಂದಿದ್ದು, ಕ್ಯಾತ್ಸಂದ್ರ ಹಾಗೂ ಬಂಡೆಪಾಳ್ಯದಿಂದ ಶ್ರೀಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳಲ್ಲಿ ಕಣ್ಣಾಯಿಸಿದುದ್ದಕ್ಕೂ ಜನಸಾಗರದ್ದೇ ಕಾರುಬಾರು.

# ಕೃಷಿ ಆಧಾರಿತ ಉದ್ಯೋಗ ಸೃಷ್ಟಿ ಇಂದಿನ ಅಗತ್ಯ: ಶೇಷಮೂರ್ತಿ ಅವಧಾನಿ



**ಕಲಬುರಗಿ,ಏ.1–**ಇಂದು ಪರಿಸರ ರಕ್ಷಣೆ, ಪರಿಸರ ಪೋಷಣೆ ಎಲ್ಲರ ಜವಾಬ್ದಾರಿಯಾಗಬೇಕಿದೆ. ಕೃಷಿ ಆಧಾರಿತ ಉದ್ಯೋಗ ಸೃಷ್ಟಿಯಾದರೆ ಮಾತ್ರ ಪರಿಸರ, ಪ್ರಕೃತಿ ಹಚ್ಚ ಹಸಿರಾಗಿರಲು ಸಾಧ್ಯ ಎಂದು ಹಿರಿಯ ಪತ್ರಕರ್ತ ಶೇಷಮೂರ್ತಿ ಅವಧಾನಿಯವರು ಹೇಳಿದರು. ಕಲುಬುರಗಿ ತಾಲೂಕಿನ ಔರಾದ(ಬಿ) ಗ್ರಾಮದ ಶ್ರೀಸ್ವಾಮಿಸಮರ್ಥ ದೇವಸ್ಥಾನದ ಆವರಣದಲ್ಲಿ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯ, ಆಯ್.ಕ್ಯು.ಎ.ಸಿ. ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆಯ ಕೋಶದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೃಷಿಯೇತರ ಜಮೀನು ಮುಂದಿನ ಯುವಪೀಳಿಗೆಯನ್ನು ಕತ್ತಲಲಿ ನೂಕುವ ಸಂಭವವಿದೆ. ಔದ್ಯೋಗಿಕರಣ ಪರಿಸರಕ್ಕೆ ಪೂರಕವಾಗಿದ್ದರೆ ಮಾತ್ರ ಸಮಾಜ ನೆಮ್ಮದಿಯಿಂದ ಇರಲು ಸಾಧ್ಯ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗುಲ್ಬರ್ಗ ವಿಶ್ವವಿದ್ಯಾಲಯ ಕಲಬುರಗಿಯ ಎನ್.ಎಸ್.ಎಸ್. ಕೋಶದ ಸಂಯೋಜನಾಧಿಕಾರಿ ಡಾ.ಎಚ್.ಎಸ್.ಜಂಗಯವರು ಮಾತನಾಡಿ, ಯುವಜನತೆ ಸ್ಥಿರ ಮಾದರಿ ಕಡೆ ವಾಲುತ್ತಿರುವುದು ದುರಂತ ಎಂದು ಕಳವಳ ವ್ಯಕ್ತಪಡಿಸುತ್ತಾ, ಯುವಜನತೆ ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳುತ್ತ ದೇಶಕ್ಕೆ ಬೆನ್ನೆಲುಬಾಗುವ ಅವಶ್ಯಕತೆ ಇದೆ ಎಂದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಉಪಪ್ರಾಚಾರ್ಯರಾದ ಡಾ. ಗುರುಮಧ್ವಾಚಾರ್ಯರವರು ಮಾತನಾಡಿದರು. ಅಧ್ಯಕ್ಷತೆಯನ್ನು ವಹಿಸಿದ್ದ ನೂತನ ವಿದ್ಯಾಲಯ ಸಂಸ್ಥೆಯ ಕಾಲೇಜು ಶೈಕ್ಷಣಿಕ ಮಂಡಳಿಯ ಸದಸ್ಯರು ಹಾಗೂ ನೂತನ ವಿದ್ಯಾಲಯ ಸಂಸ್ಥೆಯ ಮಾಜಿ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾದ ಗಿರೀಶ್ ಗಲಗಲಿಯವರು ಮಾತನಾಡಿ, ಶಿಬಿರಾರ್ಥಿಗಳು ರಾಷ್ಟ್ರೀಯ ಸೇವಾ ಯೋಜನೆಯ ಮೂಲ ಧ್ಯೇಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ವೇದಿಕೆಯ ಮೇಲೆ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ದಯಾನಂದ ಎಂ. ಶಾಸ್ತ್ರಿ, ಪ್ರೊ.ಗುರುದತ್ತ ಪಿ. ಕುಲಕರ್ಣಿ, ಶ್ರೀಕಾಂತ್ ಪಂಡಿತ ಹಾಗೂ ಡಾ. ಮಲ್ಲಿನಾಥ ಎಸ್. ತಳವಾರ ಉಪಸ್ಥಿತರಿದ್ದರು. ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರದಲ್ಲಿ ಅರವತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು. ಕುಮಾರಿ ಸ್ಫೂರ್ತಿ ಮತ್ತು ಕುಮಾರಿ ಪ್ರೀತಿ ಎನ್.ಎಸ್.ಎಸ್. ಗೀತೆ ಹಾಡಿದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ದಯಾನಂದ ಎಂ. ಶಾಸ್ತ್ರಿಯವರು ಪ್ರಾಸ್ತಾವಿಕ ಹಾಗೂ ಸ್ವಾಗತ ಭಾಷಣ ಮಾಡಿದರು. ಡಾ. ಮಲ್ಲಿನಾಥ ಎಸ್. ತಳವಾರ ನಿರೂಪಿಸಿದರು. ಕುಮಾರಿ ಸೃಷ್ಟಿ ವಂದಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE